ಕಲ್ಯಾಣ ಕರ್ನಾಟಕದ ಪ್ರತಿಬಿಂಬ......

ವಿಜಯನಗರ ಜಿಲ್ಲಾ ಆವೃತ್ತಿ

# ವಾರ್ತಾ ಲೋಕ

"VARTHA LOKA" Kannada Daily Morning News Paper, VIJAYNAGAR. Dist.: Vijaynagar

ಕನ್ನಡ ದಿನಪತ್ರಿಕೆ

ಕೊಪ್ಪಳ | ರಾಯಚೂರು | ಬಳ್ಳಾರಿ | ವಿಜಯನಗರ | ಯಾದಗಿರಿ | ಬೆಂಗಳೂರು | ಬೀದರ ಹಾಗೂ ಕಲಬುರ್ಗಿ ಜಿಲ್ಲೆಯಲ್ಲಿ ಏಕಕಾಲಕ್ಕೆ ಪ್ರಕಾಶಿತ

ಸಂಪಾದಕರು: ಎಸ್. ವಿ. ಕುಲಕರ್ಣಿ ಜಿ.    ಸ್ಥಾನಿಕ ಸಂಪಾದಕರು: ಮೊಹಮ್ಮದ ಜಿಲಾನ ಜಿ.

ವಾರ್ತಾ ಲೋಕ
ಕನ್ನಡ ದಿನ ಪತ್ರಿಕೆ ಕಛೇರಿ
ರಾಜಾಸಾಬ ಕಂಪೌಂಡ್,
ಕುಲಾಯಪ್ಪ ಬಿಲ್ಡಿಂಗ್
ಎದುರುಗಡೆ, 1ನೇ ಕ್ರಾಸ್
ಪಟೇಲ್ ನಗರ,
ಹೊಸಪೇಟೆ
ಮೊ.ನಂ : 9482156289

E-mail ID : varthalokahpt@gmail.com

VOLUME : 01 | ISSUE : 180 | Sunday 01-12-2024 | RNI No.: KARKAN/2010/47633 | Page : 4+II | Mob. No. : 9482156289 | Price : ₹3/-

# ಬಾಣಂತಿಯರ ಸಾವು ಪ್ರಕರಣ

## ಡ್ರಗ್ ಕಂಟ್ರೋಲರ್ ಅಮಾನತು: ಸಿ.ಎಂ

● ವಾರ್ತಾಲೋಕ ವಾರ್ತೆ



**ಬೆಂಗಳೂರು ನ.30 :** ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕರ್ತವ್ಯಲೋಪಕ್ಕಾಗಿ ಡ್ರಗ್ ಕಂಟ್ರೋಲರ್ ಉಮೇಶ್ ಅವರನ್ನು ಸಸ್ಪೆಂಡ್ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಇತ್ತೀಚೆಗೆ ಸಂಭವಿಸಿದ ಬಾಣಂತಿಯರ ಸಾವಿನ ಕುರಿತಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಸಭೆಯ ಬಳಿಕ ಮಾಧ್ಯಮದವರ ಜೊತೆ ಮಾತನಾಡಿದರು.

ರಿಂಗರ್ ಲ್ಯಾಕ್ಟೇಟ್ ದ್ರಾವಣ ಪೂರೈಸಿರುವ ಪಶ್ಚಿಮ ಬಂಗಾ ಕಂಪೆನಿಯನ್ನು ಕಪ್ಪು ಪಟ್ಟಿಗೆ ಸೇರಿಸಿ, ಕಂಪೆನಿ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಆದೇಶಿಸಲಾಗಿದೆ ಎಂದರು.

ಸಾವಿನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಸರ್ಕಾರದಿಂದ 2 ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಡ್ರಗ್ ಪೂರೈಸಿದ ಕಂಪೆನಿಯಿಂದಲೂ ಪರಿಹಾರವನ್ನು ವಸೂಲು ಮಾಡಿ, ಮೃತರ ಕುಟುಂಬಕ್ಕೆ ನೀಡಲು ಸೂಚನೆ ನೀಡಲಾಗಿದೆ ಎಂದರು.

ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಈ ರೀತಿಯ ಸಾವಿನ ಪ್ರಕರಣಗಳ ಬಗ್ಗೆ ತನಿಖೆ ನಡೆಸಲು ಅಭಿವೃದ್ಧಿ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಲು ನಿರ್ಧಾರಿಸಲಾಗಿದೆ ಎಂದರು.

ನವೆಂಬರ್ 11ರಿಂದ ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ನಾಲ್ವರು ಬಾಣಂತಿಯರ ಸಾವಿನ ಪ್ರಕರಣ ವರದಿಯಾಗಿದೆ. ಹಿಮೋಡಯಾಲಿಸಿಸ್ ಮತ್ತು ಬಹು ಅಂಗಗಳ ವೈಫಲ್ಯ ಹಾಗೂ ತೀವ್ರತರ ಮೂತ್ರಪಿಂಡದ ಗಾಯದಂತಹ ತೊಂದರೆಗಳ 7 ಪ್ರಕರಣಗಳಲ್ಲಿ , 4ಬಾಣಂತಿಯರು ಸಾವಿಗೀಡಾಗಿದ್ದಾರೆ ಎಂದರು.

ಉಳಿದ 3 ರೋಗಿಗಳಲ್ಲಿ 2 ಮಂದಿ ಆಸ್ಪತ್ರೆಯಿಂದ ಬಿಡುಗಡೆಯಾಗಿ ಬಳ್ಳಾರಿ ವಿಮ್ಸ್‌ನಲ್ಲಿ ಚೇತರಿಸಿಕೊಳ್ಳುತ್ತಿದ್ದಾರೆ.ಬಾಣಂತಿಯರ ಸಾವಿನ ಕುತು ತಜ್ಞರ ಸಮಿತಿ ರಚಿಸಿ ಘಟನಾವಳಿಗಳ ಬಗ್ಗೆ ಪ್ರಾಥಮಿಕ ವರದಿ ಪಡೆಯಲಾಗಿದೆ ತಿಳಿಸಿದರು.

ಬಾಣಂತಿಯರಿಗೆ ನೀಡಲಾಗಿರುವ ರಿಂಗರ್ ಲ್ಯಾಕ್ಟೇಟ್ ದ್ರಾವಣದ ಎಲ್ಲಾ ಬ್ಯಾಚ್‌ಗಳ ಬಳಕೆಯನ್ನು ಹಿಂಪಡೆಯಲಾಗಿದ್ದು, ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಳಸಲಾದ ದ್ರಾವಣ ಪರೀಕ್ಷಿಸಲು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ ಎಂದರು.

ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಈ ರೀತಿಯ ಸಾವಿನ ಪ್ರಕರಣಗಳ
ಬಗ್ಗೆ ತನಿಖೆ ನಡೆಸಲು ಅಭಿವೃದ್ಧಿ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿಯನ್ನು ರಚಿಸಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದರು.

ತಮಿಳುನಾಡು ಮಾದರಿಯಲ್ಲಿ ಔಷಧಿಗಳ ಖರೀದಿ ಪ್ರಕ್ರಿಯೆ ಹಾಗೂ ಔಷಧ ನಿಯಂತ್ರಣ ಇಲಾಖೆಯನ್ನು ಪುನಾರಚನೆ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಲಾಗಿದೆ ಎಂದರು.

ಇನ್ನು ಮುಂದೆ ಈ ರೀತಿಯ ದುರ್ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದ ಅವರು, ಪ್ರಯೋಗಾಲಯದ ವರದಿ ಬಂದ ಬಳಿಕ ಘಟನೆಗೆ ಜವಾಬ್ದಾರರಾದ ಪ್ರತಿಯೊಬ್ಬರನ್ನು ಗುರುತಿಸಿ ಕ್ರಮ ಕೈಗೊಳ್ಳಬೇಕು. ಡ್ರಗ್ ಕಂಟ್ರೋಲರ್ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲು ಆದೇಶಿಸಿದರು. ಔಷಧ ನಿಯಂತ್ರಣ ಕಾಯ್ದೆಯನ್ನು ಇನ್ನಷ್ಟು ಬಿಗಿಗೊಳಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ತೀರ್ಮಾನಿಸಲಾಗಿದೆ.

ತಮಿಳುನಾಡು ಮಾದರಿಯಲ್ಲಿ ಔಷಧಿಗಳ ಖರೀದಿ ಪ್ರಕ್ರಿಯೆ ಹಾಗೂ ಔಷಧ ನಿಯಂತ್ರಣ ಇಲಾಖೆಯನ್ನು ಪುನಾರಚನೆ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

ಮೆಡಿಸಿನ್ ಮಾಫಿಯಾ ನಿಯಂತ್ರಣಕ್ಕೆ ಅತ್ಯಂತ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕಾದ ಅನಿವಾರ್ಯತೆ ಇದೆ ಎನ್ನುವ ಅಭಿಪ್ರಾಯಗಳು ಸಭೆಯಲ್ಲಿ ಹಲವರಿಂದ ವ್ಯಕ್ತವಾದವು.
ಮೊದಲಿಗೆ
ಈ ಬಗ್ಗೆ ಕೇಂದ್ರಕ್ಕೆ ಪತ್ರ ಬರೆಯುವುದು ಹಾಗೂ ತಮಿಳುನಾಡು ಮಾದರಿಯಲ್ಲಿ ಡ್ರಗ್ ನಿಯಂತ್ರಣಕ್ಕೆ ಹೊಸ ರೂಪು ರೇಷೆ,
ನಿಯಮಾವಳಿ ರಚಿಸುವ ಬಗ್ಗೆ ಚರ್ಚಿಸಲಾಯಿತು ಎಂದರು.

## ಸಂಕ್ಷಿಪ್ತ ವಾರ್ತೆ

### ಮೃತ ಬಾಣಂತಿ ಕುಟುಂಬಕ್ಕೆ ಶಾಸಕ ಡಾ|| ಶ್ರೀನಿವಾಸ್ ಎನ್.ಟಿ. ಸಾಂತ್ವನ



● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ: ನಂಬರ್ 30 :** ಬಳ್ಳಾರಿಯ ಬೀಮ್ಸ್ ಆಸ್ಪತ್ರೆಯಲ್ಲಿ ಕಳೆದ ವಾರದಿಂದ ಬಾಣಂತಿಯರ ಸರಣಿ ಸಾವುಗಳು ಮುಂದುವರೆದಿದ್ದು ಐದಕ್ಕೆ ಏರಿಕೆಯಾಗಿದೆ. ಚಿಕಿತ್ಸೆ ಫಲಕಾರಿಯಾಗದೆ ಕೂಡ್ಲಿಗಿ ತಾಲೂಕಿನ ಚಂದ್ರಶೇಖರಪುರ ಗ್ರಾಮದ ಮಹಾಲಕ್ಷ್ಮಿ (20) ಎಂಬ ಮಹಿಳೆ ಸಾವನ್ನಪ್ಪಿರುತ್ತಾರೆ.

ಈ ಘಟನೆ ಹಿನ್ನೆಲೆಯಲ್ಲಿ ಆಸ್ಪತ್ರೆಗಳ ವಿರುದ್ಧ ಕುಟುಂಬಸ್ಥರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು. ಈ ಹಿನ್ನಲೆಯಲ್ಲಿ ಮೃತ ಬಾಣಂತಿ ಮಹಾಲಕ್ಷ್ಮಿ ಅವರ ಮನೆಗೆ ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್ ಅವರು ಶುಕ್ರವಾರ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮೃತ ಮಹಾಲಕ್ಷ್ಮಿ ಮಗುವಿನ ಜೀವನಕ್ಕೆ ಬೇಕಾಗುವ ಆರ್ಥಿಕ ವ್ಯವಸ್ಥೆ ನೀಡುವುದಾಗಿ ಭರವಸೆ ನೀಡಿದರು.ಸಾರ್ವಜನಿಕರು ಯಾವುದೇ ಕಾರಣಕ್ಕೂ ಹೆರಿಗೆಗಳನ್ನು ಮನೆಯಲ್ಲಿ ಮಾಡಿಸಬಾರದು. ಕೂಡಲೆ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ತೆರಳಿ ವೈದ್ಯರ ಸಲಹೆ ಸೂಚನೆಗಳನ್ನು ಪಾಲಿಸಿಹೆರಿಗೆಗಳನ್ನುಮಾಡಿಸಬೇಕು.ಗರ್ಭಿಣಿಯರಿಗೆಮಾನಸಿಕವಾಗಿ ಧೈರ್ಯ ತುಂಬಬೇಕು. ಈ ರೀತಿಯ ವೈದ್ಯರ ಸಲಹೆಗಳನ್ನು ಪಡೆದು ಪಾಲಿಸುವುದರಿಂದ ಇಂತಹ ಸಾವು ನೋವುಗಳು ತಡೆಯಬಹುದು ಎಂದು ಹೇಳಿದರು.

ಈ ವೇಳೆ ಚಂದ್ರಶೇಖರಪುರ ಗ್ರಾಮದ ಪ್ರಮುಖ ಮುಖಂಡರು, ಕಾಂಗ್ರೆಸ್ ಮುಖಂಡರು, ಉಪಸ್ಥಿತರಿದ್ದರು.

ವರದಿ ಹೆಚ್ ವೀರಣ್ಣ

### ಪತ್ರಕರ್ತ ಸಮಾಜ ತಿದ್ದುವ ಕೆಲಸ ಮಾಡಬೇಕು: ನಿವೃತ್ತ ಸರ್ಕಾರಿ ಅಭಿಯೋಜಕ ಬಿ ಜಯರಾಮ್

● ವಾರ್ತಾಲೋಕ ವಾರ್ತೆ



**ಬಳ್ಳಾರಿ ನವಂಬರ್ 30 :** ಪತ್ರಕರ್ತನಾದವನು ಸಮಾಜದ ಅಂಕು ಡೊಂಕುಗಳನ್ನು ತಿದ್ದುತ್ತಾ ಸಮಾಜವನ್ನು ಸುಧಾರಿಸುವಂತಹ ವರದಿಗಳನ್ನುಹೆಕ್ಕಿಬರೆದುತನ್ಮೂಲಕ ಸಮಾಜದಲ್ಲಿ ತನ್ನ ಮೇಲೆ ಇರುವ ಮುಖ್ಯವಾದ ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ನಿವೃತ್ತ ಸರ್ಕಾರಿ ಅಭಿಯೋಜಕ ಹಾಗೂ ಬಳ್ಳಾರಿ ಜಿಲ್ಲಾ ವಾಲ್ಮೀಕಿ ವಿದ್ಯಾ ಅಭಿವೃದ್ಧಿಸಂಘದಉಪಾಧ್ಯಕ್ಷರಾದ ಬಿ ಜಯರಾಮ್ ತಿಳಿಸಿದರು.

ಅವರು ನಗರದ ಬಿಡಿಎ ಮೈದಾನದ ಸಭಾಂಗಣದಲ್ಲಿ ಕರ್ನಾಟಕ ಕಾರ್ಯನಿರ್ತಾ ಪತ್ರಕರ್ತರ ಧ್ವನಿ ಸಂಘಟನೆ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಪತ್ರಕರ್ತರ ಸಮ್ಮೇಳನದಲ್ಲಿ ದೇಶದ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳಾದಸಂತೋಷ್‌ಹೆಗಡೆಅವರಿಂದ"ಅಭಿಯೋಜಕ ರತ್ನ"ಪ್ರಶಸ್ತಿಯನ್ನುಸ್ವೀಕರಿಸಿಮಾತನಾಡಿ,ನಗರದಲ್ಲಿಪತ್ರಕರ್ತರಹಲವು ಸಂಘಟನೆಗಳಿದ್ದು ಇದರಿಂದ ಪತ್ರಕರ್ತರಲ್ಲಿ ಒಡಕು ಉಂಟಾಗಿದೆ, ಎಲ್ಲರೂ ಒಗ್ಗೂಡಿ ಕೆಲಸ ಮಾಡಿದಲ್ಲಿ ಏನಾದರೂ ಸಾಧಿಸಬಹುದು ಅದು ಬಿಟ್ಟುತಮ್ಮ ತಮ್ಮಲ್ಲಿ ವಾಲಾ ಜಗಳಗಳನ್ನುಸೃಷ್ಟಿಸಿಕೊಂಡು ಒಬ್ಬರ ಮೇಲೆ ಒಬ್ಬರು ಮೊಖದ್ದಮೆಯನ್ನುದಾಖಲಿಸಿಕೊಳ್ಳುತ್ತಾ ಹಾದಿರಂಪ ಬೀದಿರಂಪಮಾಡಿಕೊಳ್ಳುವುದುಎಷ್ಟುಸರಿಇದುಪತ್ರಿಕಾಮಾಧ್ಯಮದಲ್ಲಿ ಒಳ್ಳೆಯ ಬೆಳವಣಿಗೆ ಅಲ್ಲ ಎಲ್ಲಾ ಪತ್ರಕರ್ತರು ಒಂದಾದಲ್ಲಿ ಒಗ್ಗಟ್ಟಿನಲ್ಲಿ ಬಲ ಇದೆ ಎಂಬಂತೆ ಸಂಘಟನೆಗೆ ಬಲ ಬರುತ್ತದೆ ಎಲ್ಲರೂ ಒಂದಾಗಿ ಮುನ್ನಡೆಯಿರಿ ಎಂಬುದು ನನ್ನ ಆಶಯವಾಗಿದೆ ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಕಮ್ಮರಚೆಡು ಮಠದ ಕಲ್ಯಾಣ ಸ್ವಾಮಿ, ನಗರ ಶಾಸಕ ಭರತ್ ರೆಡ್ಡಿ, ಪತ್ರಕರ್ತರ ಧ್ವನಿ ಸಂಘದ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ, ಜಿಲ್ಲಾಧ್ಯಕ್ಷ ಗಿರಿ ಯಾದವ್, ಉಪಾಧ್ಯಕ್ಷ ಹಗರಿ ಪ್ರಭಾಕರ್, ಕುರುಗೋಡು ಭೀಮಣ್ಣ ಸೇರಿದಂತೆ ಇತರರಿದ್ದರು.

### ಆಕಸ್ಮಿಕ ಬೆಂಕಿ-ಸಂಪೂರ್ಣ ಭಸ್ಮವಾದ ಟಾಟಾ ಸಫಾರಿ ಕಾರು!!

● ವಾರ್ತಾಲೋಕ ವಾರ್ತೆ

**ಹೊಸಪೇಟೆ-: ನವಂಬರ್ 30 :** ಬಳ್ಳಾರಿ ಎನ್.ಎಚ್-67 ರಸ್ತೆಯಲ್ಲಿ ಧಾರವಾಡ ಆಂಜಿನೇಯ ಗುಡಿ ಹತ್ತಿರ ಗುರುವಾರದಂದು ಬೆಳಿಗ್ಗೆ 10.52ಕ್ಕೆ ಹೊಸಪೇಟೆ ಕಡೆಗೆ ಬರುತ್ತಿದ್ದಾಗ ಚಾಲನೆಯಲ್ಲಿದ್ದ ಕಾರು ಟಾಟಾ ಸಫಾರಿ ಕಾರ್ ನಂ. ಪಿವೈ05ಆರ್5949 ರಲ್ಲಿ ಚಾಲಕ ಇ.ಸುರೇಶರವರೊಂದಿಗೆ ಹೊಸಪೇಟೆ ಕಡೆಗೆ ಬರುತ್ತಿದ್ದಾಗ ಚಾಲನೆಯಲ್ಲಿದ್ದ ಕಾರಿನ ಮ್ಯೂಜಿಕ್ ಸಿಸ್ಟಮ್ ಇದ್ದಕ್ಕಿದ್ದಂತೆ ಆಫ್ ಆಗಿದ್ದು, ಇಂಜಿನ್ ನಲ್ಲಿ ಹೊಗೆ ಕಾಣಿಸಿಕೊಂಡಿದ್ದು ಕಾರನ್ನು ಸೈಡಿಗೆ ಹಾಕುವಷ್ಟರಲ್ಲಿ ಇಂಜಿನ್ ತುಂಬಾ ಬೆಂಕಿ ಹತ್ತಿಕೊಂಡಿದ್ದು, ಕಾರಿನಿಂದ ಇಳಿದು ನೋಡುವಷ್ಟರಲ್ಲಿ ಕಾರಿನ ಮುಂಭಾಗವೆಲ್ಲಾ ಸಂಪೂರ್ಣವಾಗಿ ಬೆಂಕಿ ಆವರಿಸಿತು, ಅಷ್ಟರಲ್ಲಿ ನಾವು ಫೈರ್ ಸ್ಟೇಶನ್ ಗೆ ಪೋನ್ ಮಾಡಿ ವಿಷಯ ತಿಳಿಸಿದವು, ಅದು ಬರುವಷ್ಟರಲ್ಲಿ ಕಾರು ಸಂಪೂರ್ಣವಾಗಿ ಸುಟ್ಟುಹೋಗಿದ್ದು, ತನಗೆ ರೂ-25,54,550/- ನಷ್ಟವುಂಟಾಗಿರುತ್ತದೆ. ಈ ಘಟನೆಯು ಇಂಜಿನ್ ನ ತಾಂತ್ರಿಕ ದೋಷದಿಂದ ಆಗಿದ್ದು,ಕಾರಿನಲ್ಲಿದ್ದ ಎಲ್ಲರೂ ಯಾವುದೇ ಅಪಾಯವಿಲ್ಲದೆ ಪಾರಾಗಿದ್ದು, ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಿದ್ದು, ಹೊಸಪೇಟೆ ಗ್ರಾಮೀಣ ಪೊಲೀಸ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ವರದಿ ಅಂಬರೀಶ್ ನಾಯಕ್

## ಪೂರಕ ಪೌಷ್ಠಿಕ ಆಹಾರ ವಿತರಣೆ ಜವಾಬ್ದಾರಿಯಿಂದ ಮುಕ್ತಗೊಳಿಸಲು ಮನವಿ



● ವಾರ್ತಾಲೋಕ ವಾರ್ತೆ

**ಕೊಟ್ಟೂರು :ನವಂಬರ್ 30 :** ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನ ಬಿಸಿಯೂಟ ವ್ಯವಸ್ಥೆ ನಡೆಯುತ್ತಿದ್ದು, ಅದರ ಜೊತೆ ಅಜೀಂ ಪ್ರೇಮ್ಜೀ ಫೌಂಡೇಷನ್ ಸಹಭಾಗಿತ್ವದಲ್ಲಿ ಪೂರಕ ಪೌಷ್ಠಿಕ ಆಹಾರವಾದ ಮೊಟ್ಟೆ, ಬಾಳೆಹಣ್ಣು, ಶೇಂಗ ಚಿಕ್ಕಿ ವಿತರಣೆ ಮಾಡಲಾಗುತ್ತಿದೆ. ಸದರಿ ಪೂರಕ ಪೌಷ್ಠಿಕ ಆಹಾರ ವ್ಯವಸ್ಥೆಯನ್ನು ಮಾಡಲು ಮುಖ್ಯಗುರುಗಳು ಮಾರುಕಟ್ಟೆಗೆ ಹೋಗಿ ಖರೀದಿ ಮತ್ತು ಸಾಗಾಣಿಕೆ ಮಾಡಬೇಕಾಗಿರುತ್ತದೆ. ಇದರಿಂದ ಗುಣಾತ್ಮಕ ಶಿಕ್ಷಣ ನೀಡಲು ಅಡಚಣೆಯಾಗುತ್ತಿದೆ.

ಆದ್ದರಿಂದ ಬಿಸಿಊಟದ ಜೊತೆ ನೀಡುವ ಪೂರಕ ಪೌಷ್ಠಿಕ ಆಹಾರಗಳನ್ನು ಖರೀದಿ, ಸಾಗಾಣಿಕೆ ಹಾಗೂ ವಿತರಣೆ ಜವಾಬ್ದಾರಿಯಿಂದ ಮುಕ್ತಗೊಳಿಸಿ ಈ ಜವಾಬ್ದಾರಿಯನ್ನು ಬೇರೆ ವ್ಯಕ್ತಿಗಳಿಗೆ ಅಥವಾ ಸಂಘಸಂಸ್ಥೆಗಳಿಗೆ ವಹಿಸಿ ಸರ್ಕಾರಿ ಶಾಲಾ ಮಕ್ಕಳ ಗುಣಾತ್ಮಕ ಶಿಕ್ಷಣಕ್ಕೆ ಅನುವು ಮಾಡಿಕೊಡಬೇಕೆಂದು ಒತ್ತಾಯಿಸಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಪ್ರೌಢಶಾಲಾ ಶಿಕ್ಷಕರ ಸಂಘ, ಸರ್ಕಾರಿ ನೌಕರರ ಸಂಘದಿಂದ ತಹಶೀಲ್ದಾರರಿಗೆ ಮನವಿಯನ್ನು ಸಲ್ಲಿಸಿದರು.

ಈ ಸಮಯದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳಾದ ಮುತ್ತೇಶ, ನಾಗೇಶ ಪಿ, ಶಶಿಕಲಾ ಕೆ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಿದ್ದಪ್ಪ,

ಸರ್ಕಾರಿ ನೌಕರರ ಸಂಘದ ಅಧ್ಯಕ್ಷ- ಯೋಗೀಶ್ವರ ದಿನ್ನೆ, ಉಪಾಧ್ಯಕ್ಷ- ಸಿದ್ದಪ್ಪ ಜಿ, ರಾಜ್ಯಪರಿಷತ್ ಸದಸ್ಯರಾದ ಎಸ್ ಎಂ ಗುರುಬಸವರಾಜ, ಕಾರ್ಯದರ್ಶಿ- ರಮೇಶ ಕೆ, ಜಂಟಿ ಕಾರ್ಯದರ್ಶಿ- ಶಿವಕುಮಾರ್ ಎಂ, ಸಂಘಟನಾ ಕಾರ್ಯದರ್ಶಿ- ಗುರುಬಸವರಾಜ ಎ ವಿ, ಚನ್ನೇಶಪ್ಪ , ಮುಖ್ಯಗುರುಗಳು ಹಾಗೂ ಸಹಶಿಕ್ಷಕರು ಹಾಜರಿದ್ದರು.

ವರದಿ ಪರಶುರಾಮ್

## ಈಚಲ ಬೊಮ್ಮನಹಳ್ಳಿ ಉಡಸಲಮ್ಮ ದೇವಿ ದೇವಸ್ಥಾನದಲ್ಲಿ ಕಳ್ಳತನ, ಆರೋಪಿಗಳ ಬಂಧನ




● ವಾರ್ತಾಲೋಕ ವಾರ್ತೆ

**ಕೂಡ್ಲಿಗಿ: ನವಂಬರ್ 30 :** ತಾಲ್ಲೂಕಿನ ಈಚಲಬೊಮ್ಮನಹಳ್ಳಿಯ ಹೊರ ವಲಯದಲ್ಲಿನ ಉಡಸಲಮ್ಮ ದೇವಿ ದೇವಸ್ಥಾನದಲ್ಲಿ ಕಳ್ಳತನ ಮಾಡಿದ ಆರೋಪಿಗಳನ್ನು ಶನಿವಾರ ಬಂಧಿಸಿದ ಕೂಡ್ಲಿಗಿ ಪೊಲೀಸರು, ಕಳುವಾಗಿದ್ದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಹಡಗಲಿ ತಾಲ್ಲೂಕಿನ ಕೆಂಚಮಲ್ಲನಹಳ್ಳಿಯ ಹಡಪದ ವೀರೇಶ್ ಹಾಗೂ ಕೂಡ್ಲಿಗಿ ತಾಲ್ಲೂಕಿನ ಪಾಲಯ್ಯನಕೋಟೆ ಗ್ರಾಮದ ಎಚ್. ಹನುಮಂತಪ್ಪ ಬಂಧಿತರು.

ನವೆಂಬರ್ 23ರಂದು ರಾತ್ರಿ ಉಡಸಲಮ್ಮ ದೇವಿಯ ದೇವಸ್ಥಾನ ಬಾಗಿಲಿನ ಚಿಲಕವನ್ನು ಮುರಿದು ಒಳ ಹೊಕ್ಕ ಕಳ್ಳರು, ದೇವಸ್ಥಾನದಲ್ಲಿದ್ದ ಗಾಡ್ರೇಜ್‌ನಲ್ಲಿದ್ದ 146786 ರೂಪಾಯಿ ಬೆಲೆ ಬಾಳುವ ದೇವರ ಮೂರ್ತಿ ಆಭರಣ ಮತ್ತು ದೇವತೆಯ ಕೊರಳಲ್ಲಿದ್ದ 12900 ಬೆಳೆ ಬಾಳುವ ಬಂಗಾರದ ತಾಳಿ, 26153 ಬೆಳೆ ಬಾಳುವ ಕಂಚಿನ ಆಭರಣಗಳು, 10 ಸಾವಿರ ರೂಪಾಯಿ ಬೆಲೆ ಬಾಳುವ ಯಂಪಿಪ್ಲೇಯರ್ ಸೇರಿದಂತೆ ಒಟ್ಟು 195839 ರೂಪಾಯಿ ಬೆಲೆ ಬಾಳುವ ವಸ್ತುಗಳನ್ನು ಬಂಧಿತ ಆರೋಪಿಗಳಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಸಿಪಿಐ ಸುರೇಶ್ ಎಚ್. ತಳವಾರ್ ತಿಳಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಹರಿಬಾಬು ಬಿ.ಎಲ್., ಹೆಚ್ಚುವರಿ ಪೊಲೀಸ್ ವರೀಷ್ಠಾಧಿಕಾರಿ ಸಲೀ ಪಾಷ, ಕೂಡ್ಲಿಗಿ ಡಿವೈಎಸ್ಪಿ ಮಲ್ಲೇಶಪ್ಪ ಮಲ್ಲಾಪುರ ಅವರ ಮಾರ್ಗದರ್ಶನದಲ್ಲಿ ಕಾರ್ಯಚರಣೆ ಮಾಡಿದ ಸಿಪಿಐ ಸುರೇಶ್ ಎಚ್. ತಳವಾರ್, ಪಿಎಸ್ಐ ಸಿ. ಪ್ರಕಾಶ್,ಸಿಬ್ಬಂದಿಯವರಾದ ಅಂಜಿನಪ್ಪ, ಹಸನುಲ್ಲಾ, ಜಿ. ಹಂಪಣ್ಣ, ಬಿ. ರಾಘವೇಂದ್ರ, ಪ್ರವೀಣ್ ಕುಮಾರ್, ಶಿವಕುಮಾರ್ ಅವರಿದ್ದ ತಂಡ ಆರೋಪಿಗಳನ್ನು ಬಂಧಿಸಿದ್ದಾರೆ.

ವರದಿ ಹೆಚ್ಚು ವೀರಣ್ಣ

## ಅದ್ದೂರಿಯಿಂದ ಜರುಗಿದ 'ವಿಕಲಚೇತನರ ಸಪ್ತಾಹ ಕಾರ್ಯಕ್ರಮ'

### ವಿಕಲಚೇತನರಿಗೆ ಅನುಕಂಪಬೇಡ, ಸರ್ಕಾರಿಸೌಲಭ್ಯಗಳನ್ನು ಕಲ್ಪಿಸಿರಿ- ಉಮಾಪತಿಗೌಡ

● ವಾರ್ತಾಲೋಕ ವಾರ್ತೆ



**ಕುರುಗೋಡು.ನ.30 :** ವಿಕಲಚೇತನರಿಗೆ ಸಮಾಜದಲ್ಲಿ ವಿಕಲಚೇತನರಿಗೆ ಅನುಕಂಪ ಬೇಡ, ಬದಲಾಗಿ ಅವರಿಗೆ ಜೀವನವನ್ನು ರೂಪಿಸಲು ಸರ್ಕಾರಿ ಸೌಲಭ್ಯಗಳನ್ನು ಕಲ್ಪಿಸಲು ಮುಂದಾಗಬೇಕೆಂದು ಕುರುಗೋಡು ಸ್ಮೈಲ್‌ಸಂಸ್ಥೆಯ ಕಾರ್ಯದರ್ಶಿ ಕೆಎಂ. ಉಮಾಪತಿಗೌಡ್ರು ಹೇಳಿದರು.

ಅವರು ಪಟ್ಟಣದ ಸಿಂದಿಗೇರಿರಸ್ತೆಯಲ್ಲಿ ಬುದ್ಧಿಮಾಂದ್ಯಮಕ್ಕಳ ಶಾಲೆಯ ಆವರಣದಲ್ಲಿ ವಿಕಲಚೇತನರ ಹಾಗು ಹಿರಿಯನಾಗರಿಕರ ಸಬಲೀಕರಣ ಇಲಾಖೆ ಬಳ್ಳಾರಿ, ಹಾಗು ಸ್ಮೈಲ್‌ಸಂಸ್ಥೆ ಕುರುಗೋಡು ಇವರ ಸಹಯೋಗದೊಂದಿಗೆ 'ವಿಕಲಚೇತನರ ಸಪ್ತಾಯ' ವಿಕಲಚೇತನರ ಕ್ರೀಡಾಕೂಟ ಹಾಗು ಸಾಂಸ್ಕೃತಿಕ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದಅವರು, ಬುದ್ದಿಮಾಂದ್ಯ ಮಕ್ಕಳ ಶಾಲೆಯ ಅಭಿವೃದ್ದಿಗೆ ಇಲಾಖೆ ಅಧಿಕಾರಿಗಳು ಪ್ರೋತ್ಸಾಹ ನೀಡಬೇಕೆಂದು ನುಡಿದರು.

ಕುರುಗೋಡು ಗ್ರೇಡ್2 ತಹಶೀಲ್ದಾರ್ ಮಲ್ಲೇಶಪ್ಪ ಅವರು ಮಾತನಾಡಿ, ಇಂದಿನ ಆಧುನಿಕ ಭರಾಟೆಯಲ್ಲಿ ತಂದೆ-ತಾಯಂದಿರು ತಮ್ಮ ಬುದ್ದಿಮಾಂದ್ಯ ಮಕ್ಕಳನ್ನು ಸಾಕುವುದು ಕಷ್ಟದ ಕೆಲಸ, ಆದರೆ ಸ್ಮೈಲ್‌ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುವ ಬುದ್ಧಿಮಾಂದ್ಯಮ ಶಾಲೆಯನ್ನು ಆರಂಭಿಸಿ ಅಲ್ಲಿನ ವಿಕಲಚೇತನ ಮಕ್ಕಳಿಗೆ ವಿದ್ಯೆ, ಬುದ್ದಿ ಕಲಿಸುವುದು ತುಂಬ ಕಷ್ಟದ ಕೆಲಸ ಎಂದು ಬುದ್ದಿಮಾಂದ್ಯಮ ಶಾಲೆಯ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಕುರುಗೋಡು ಪುರಸಭೆ ಮುಖ್ಯಾಧಿಕಾರಿ ಹರ್ಷವರ್ಧನರೆಡ್ಡಿ ಯವರು ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ಬುದ್ದಿಮಾಂಧ್ಯಮ ಮಕ್ಕಳ ಶಾಲೆಯ ಅಭಿವೃದ್ದಿಗೆ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ನಂತರ ಬುಧಿಮಾಂದ್ಯಮ ಶಾಲೆಯ ಮಕ್ಕಳಿಂದ ಶಾಟ್‌ಪುಟ್, ತ್ರೋಬಾಲ್, ಮ್ಯೂಜಿಕಲ್‌ಚೇರ್, ಗೋಣಿಚೀಲಆಟ, ಸೇರಿದಂತೆ ಇತರೆ ವೇಷ-ಭೂಷಣಸ್ಪರ್ದೆಗಳನ್ನು ಹಮ್ಮಿಕೊಳ್ಳಲಾಗಿತ್ತು. ಈ ಸ್ಪರ್ದೆಯಲ್ಲಿ ವಿಜೇತರಾದವರಿಗೆ ಪ್ರಥಮ, ದ್ವಿತೀಯ, ತೃತೀಯ ಬಹುಮಾನ ನೀಡಿ ಪ್ರೋತ್ಸಾಹಿಸಲಾಯಿತು.

ಕುರುಗೋಡು ಎಂಆರ್‌ಡಬ್ಲು ರೇವಣ್ಣ, ಸ್ಮೈಲ್‌ಸಂಸ್ಥೆಯ ಸಂಯೋಜಕ ಯು.ಫಣಿರಾಜ್,
ಬುದ್ಧಿಮಾಂದ್ಯಮ ಶಾಲೆಯ ಮುಖ್ಯಗುರು ಲತಾ, ಶಿಕ್ಷಕಿಯರು, ಕುರುಗೋಡು ತಾಲೂಕಿನ 12 ಗ್ರಾಪಂ. ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ವಿಆರ್‌ಡಬ್ಲು,
ಮತ್ತು ಯುಆರ್‌ಡ್ಲಬ್ಲು, ಮತ್ತು 12 ಗ್ರಾಪಂ.ವ್ಯಾಪ್ತಿಯ ಸುಮಾರು 60 ಮಂದಿ ಬುದ್ದಿಮಾಂದ್ಯಮಕ್ಕಳು ಭಾಗವಹಿಸಿದ್ದರು.

# ಸಚಿವರ ಕಣ್ಣಿಗೆ ಬಿದ್ದ ನಿರ್ಗತಿಕ ಕುಟುಂಬ
## ನೆರವು ನೀಡಿ ಮಾನವೀಯತೆ ತೋರಿದ ಲಕ್ಷ್ಮೀ ಹೆಬ್ಬಾಳಕರ್

**ಬೆಳಗಾವಿ :** ಮಹಿಳಾ ವಿಶ್ವವಿದ್ಯಾಲಯದ ಕಾರ್ಯಕ್ರಮದ ನಿಮಿತ್ಯ ಬುಧವಾರ ವಿಜಯಪುರಕ್ಕೆ ಆಗಮಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬೆಳಗಾವಿಗೆ ವಾಪಸ್ ಆಗುವಾಗ ಆಕಸ್ಮಾತಾಗಿ ಕಣ್ಣಿಗೆ ಕಾಣಿಸಿದ ನಿರ್ಗತಿಕ ಕುಟುಂಬವೊಂದಕ್ಕೆ ನೆರವು ನೀಡುವ ಮೂಲಕ ಮಾನವೀಯತೆ ತೋರಿಸಿದ್ದಾರೆ.

ಕಾರ್ಯಕ್ರಮ ಮುಗಿಸಿ ಮರಳುವಾಗ ವಿಜಯಪುರ – ಬಾಗಲಕೋಟೆ ಹೆದ್ದಾರಿಯ ಪಕ್ಕ ಹನಗನಹಳ್ಳಿ ಎಂಬಲ್ಲಿ ರಸ್ತೆ ಪಕ್ಕದಲ್ಲಿ ಊಟಕ್ಕೆಂದು ಸಚಿವರು ವಾಹನ ನಿಲ್ಲಿಸಿದರು. ಊಟ ಮಾಡುವಾಗ ಪಕ್ಕದಲ್ಲಿದ್ದ ಸಣ್ಣ ಮನೆಯ ಮುಂದೆ ಅಜ್ಜಿಯೊಬ್ಬಳು ಬಾಟಲಿಗಳಲ್ಲಿ ನೀರು ತುಂಬಿಸಿ ಮನೆಯ ಮುಂದೆ ಇಡುತ್ತಿದ್ದಳು. ಆ ಬಗ್ಗೆ ವಿಚಾರಿಸಿದಾಗ ರಸ್ತೆಯಲ್ಲಿ ಹೋಗುವ ಜನರು ನೀರು ಕುಡಿಯಲು ಬರುತ್ತಾರೆ. ಅವರಿಗೆ ಸಹಾಯವಾಗಲೆಂದು ಬಾಟಲಿಗಳಲ್ಲಿ ತುಂಬಿ ಇಡುವುದಾಗಿ ತಿಳಿಸಿದಳು.

ಹಾಗೆ ಮಾತನಾಡುತ್ತ ಗೌರಮ್ಮ ವಾಡೇದ ಎಂಬ ಆ ಅಜ್ಜಿ ಹಾಗೂ ಜೊತೆಗಿದ್ದ ಮಲ್ಲು ಎನ್ನುವ ಹೆಸರಿನ ಅವಳ ಮಗನ ಕುರಿತು ವಿಚಾರಿಸಿದಾಗ, ಅವರು ಹಳ್ಳಿಯಲ್ಲಿ ಹೊಂದಿದ್ದ ಮನೆಯ ಜಾಗ ರಸ್ತೆ ಮಾಡುವಾಗ ಕೈ ತಪ್ಪಿದೆ. ಇದರಿಂದಾಗಿ ವಾಸಿಸಲು ಮನೆಯೇ ಇರಲಿಲ್ಲ. ನಂತರ



ಈ ಸ್ಥಳದಲ್ಲಿದ್ದ ತೋಟದ ಮಾಲಕರು ಒಂದೇ ಕೊಠಡಿಯ ಮನೆಯಲ್ಲಿ ವಾಸಿಸಲು ಅವಕಾಶ ನೀಡಿದರು. ಆದರೆ ಅಡುಗೆ ಮಾಡಲು ಪಾತ್ರೆಗಳಾಗಲಿ, ಹಾಸಿಗೆ– ಹೊದಿಕೆಗಳಾಗಲಿ, ಕಾಳು ಕಡಿಗಳಾಗಲಿ ಏನೂ ಇಲ್ಲದೆ ಊಟಕ್ಕೂ ಸರಿಯಾಗಿ ಗತಿ ಇಲ್ಲ ಎನ್ನುವ ಅಂಶ ಗೊತ್ತಾಯಿತು. ಅವರು ಈ ಮೊದಲು ಹೊಂದಿದ್ದ ಪಡಿತರ ಕಾರ್ಡ್ ಕೂಡ ಕಳೆದುಹೋಗಿದ್ದರಿಂದ ಸರಕಾರದಿಂದ ಯಾವುದೇ ಸೌಲಭ್ಯ ಸಿಗುತ್ತಿಲ್ಲ ಎನ್ನುವುದು ಕೂಡ ತಿಳಿಯಿತು.

ಕೂಡಲೇ ಸಚಿವರು ಸ್ವಲ್ಪಮಟ್ಟಿಗೆ ಆರ್ಥಿಕ ನೆರವು ನೀಡಿದರಲ್ಲದೆ, ಆದಷ್ಟು ಶೀಘ್ರ ರೇಶನ್ ಕಾರ್ಡ್ ಮತ್ತು ಗೃಹಲಕ್ಷ್ಮೀ ಯೋಜನೆಯ ಹಣ ಬರುವಂತೆ ಮಾಡುವುದಾಗಿ ತಿಳಿಸಿ, ಸ್ಥಳದಿಂದಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನೆರವು ನೀಡಿದ ಪೊಲೀಸ್ ಅಧಿಕಾರಿ

ಇದೇ ವೇಳೆ ಅದೇ ಮಾರ್ಗವಾಗಿ ತೆರಳುತ್ತಿದ್ದ ಎಎಸ್‌ಐ ಎಚ್.ಎಸ್.ಗೌಡರ್ ಸಚಿವರ ಬಳಿ ಆಗಮಿಸಿ, ಅಜ್ಜಿಯ ಕುಟುಂಬದ ಪರಿಸ್ಥಿತಿ ವಿವರಿಸಿದರು. ಆಗ ಅಜ್ಜಿ, ತಾವು ಉಪವಾಸವಿದ್ದ ಸಂದರ್ಭದಲ್ಲಿ ಎಎಸ್‌ಐ ತಮಗೆ ಅಕ್ಕಿ ನೀಡಿ ನೆರವು ನೀಡಿದ್ದಾರೆ ಎಂದು ಸಚಿವರಿಗೆ ತಿಳಿಸಿದಳು. ಇದನ್ನು ತಿಳಿದ ಸಚಿವರು, ಸಂಕಷ್ಟದಲ್ಲಿದ್ದವರಿಗೆ ನೆರವು ನೀಡಿದ್ದಕ್ಕಾಗಿ ಸರಕಾರದ ಪರವಾಗಿ ಎಎಸ್‌ಐ ಗೌಡರ್ ಗೆ ಧನ್ಯವಾದ ತಿಳಿಸಿದರು.

ಈ ವೇಳೆ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಇಂತವರಿಗಾಗಿಯೇ ಸರಕಾರ ಗೃಹಲಕ್ಷ್ಮೀ, ಅನ್ನಭಾಗ್ಯ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಮುಖ್ಯಮಂತ್ರಿಗಳು ಬಡವರಿಗಾಗಿಯೇ ಯೋಜನೆಗಳನ್ನು ತಂದಿದ್ದಾರೆ. ಅದು ಯಾರಿಗೆ ತಲುಪಿಲ್ಲವೋ ಅಂತವರಿಗೆ ತಲುಪಿಸುವುದು ನಮ್ಮ ಕರ್ತವ್ಯ. ಆ ಕೆಲಸವನ್ನು ಶೀಘ್ರದಲ್ಲೇ ಮಾಡಲಾಗುವುದು. ಎಎಸ್‌ಐ ಗೌಡರ್ ಮನುಷ್ಯತ್ವ ತೋರಿಸಿ ಅಜ್ಜಿಯ ಕುಟುಂಬಕ್ಕೆ ನೆರವು ನೀಡಿದ್ದಾರೆ. ಅವರ ಕಾರ್ಯ ಸ್ತುತ್ಯಾರ್ಹ. ಸರಕಾರದಿಂದ ಆ ಕುಟುಂಬಕ್ಕೆ ಎಲ್ಲ ನೆರವು ಸಿಗುವಂತೆ ಮಾಡುತ್ತೇನೆ ಎಂದು ತಿಳಿಸಿದರು.

ತಮ್ಮ ಅವಸರದ ಪ್ರವಾಸದ ಮಧ್ಯೆಯೂ ಸಚಿವರು ಸಮಯ ನೀಡಿ ಇಂತಹ ನಿರ್ಗತಿಕ ಕುಟುಂಬಕ್ಕೆ ನೆರವು ನೀಡಲು ಮುಂದಾಗಿರುವುದು ಎಲ್ಲರ ಪ್ರಶಂಸೆಗೆ ಕಾರಣವಾಗಿದೆ.

# ದೇವಸ್ಥಾನದ ಕಾಂಕ್ರೀಟ್ ಕಾಮಗಾರಿಗೆ ಪೂಜೆ ಸಲ್ಲಿಸಿದ ಚನ್ನರಾಜ ಹಟ್ಟಿಹೊಳಿ



**ಬೆಳಗಾವಿ :** ಬೆಳಗಾವಿ ಗ್ರಾಮೀಣ ಕ್ಷೇತ್ರದ ಸಹ್ಯಾದ್ರಿ ನಗರದಲ್ಲಿರುವ ಶ್ರೀ ಮಹಾಬಳೇಶ್ವರ ದೇವಸ್ಥಾನದ ಮೇಲ್ಛಾವಣಿಗೆ ಕಾಂಕ್ರೀಟ್ ಹಾಕುವ ಕಾಮಗಾರಿಗೆ (ಸ್ಲ್ಯಾಬ್) ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಗುರುವಾರ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ವಿಶೇಷ ಕಾಳಜಿ ಹಾಗೂ ಅವರ ಅನುದಾನದಡಿ ದೇವಸ್ಥಾನ ಜೀರ್ಣೋದ್ಧಾರಗೊಳ್ಳಲಿದ್ದು, ಸ್ಥಳೀಯ ನಿವಾಸಿಗಳ ಸಲಹೆ ಸೂಚನೆ ಪಡೆದು, ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಚನ್ನರಾಜ ಹಟ್ಟಿಹೊಳಿ ಸೂಚಿಸಿದರು.

ಈ ವೇಳೆ ಸುರೇಶ ಜಾಡಗಿ, ಮಠಪತಿ, ಪ್ರಭಾಕರ ಮತ್ತಿಕಟ್ಟಿ, ವಿವೇಕ ಹಿರೇಮಠ, ಮನೋಹರ ಸದಲಗಿ, ಕೃಷ್ಣ ಕೊನೇರಿ ಸೇರಿದಂತೆ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

# ನಮ್ಮ ಮಾತೃಭಾಷೆ ಕನ್ನಡವನ್ನು ಉಳಿಸಿ ಬೆಳೆಸಬೇಕು: ಶಿವಶಂಕರ ಹಂಜಿ

**ಅಥಣಿ :** ನಮ್ಮ ಮಾತೃಭಾಷೆಯನ್ನು ಉಳಿಸಿ ಬೆಳೆಸುವಲ್ಲಿ, ಕನ್ನಡಿಗರಿಗೆ ಅನ್ಯಾಯವಾದಾಗ ಬೀದಿಗಿಳಿದು ಹೋರಾಟ ಮಾಡುವ ಮೂಲಕ ನ್ಯಾಯ ಒದಗಿಸುತ್ತಿರುವ ಕರ್ನಾಟಕ ರಕ್ಷಣಾ ವೇದಿಕೆ ಮುತ್ತು ಇನ್ನಿತರ ಕನ್ನಡಪರ ಸಂಘಟನೆಗಳ ಕಾರ್ಯ ಶ್ಲಾಘನೀಯ ಎಂದು ಶಿಕ್ಷಣಪ್ರೇಮಿ ಹಾಗೂ ಅಥಣಿ ವಿದ್ಯಾ ವರ್ಧಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶಿವಶಂಕರ ಹಂಜಿ ಹೇಳಿದರು.

ಅವರು ರವಿವಾರ ಅಥಣಿ ಪಟ್ಟಣದ ವಿದ್ಯಾವರ್ಧಕ ಶಿಕ್ಷಣ ಸಂಸ್ಥೆಯಲ್ಲಿ ಎಚ್ ಶಿವರಾಮೇಗೌಡರ ಕರ್ನಾಟಕ ರಕ್ಷಣಾ ವೇದಿಕೆ, ತಾಲೂಕ ಘಟಕದ ವತಿಯಿಂದ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಶುದ್ಧ ಕನ್ನಡ ಭಾಷಣ ಸ್ಪರ್ಧೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಂಗ್ಲಿಷ್ ಭಾಷೆಯ ವ್ಯಾಮೋಹ ಹೆಚ್ಚಾಗುತ್ತಿರುವ ಇಂದಿನ ದಿನಮಾನಗಳಲ್ಲಿ ನಮ್ಮ ಮಾತೃಭಾಷೆ ಕನ್ನಡವನ್ನು ಉಳಿಸಿ ಬೆಳೆಸಬೇಕು. ಸುಮಾರು 2 ಸಾವಿರ ವರ್ಷಗಳ ಇತಿಹಾಸ ಹೊಂದಿರುವ ನಮ್ಮ ಕನ್ನಡ ಭಾಷೆ ದೇಶ ವಿದೇಶಗಳಲ್ಲಿಯೂ ಬೆಳವಣಿಗೆ ಹೊಂದಿದೆ. ನಾನು ಇತ್ತೀಚಿಗೆ ಆಸ್ಟ್ರೇಲಿಯಾ ದೇಶಕ್ಕೆ ಹೋದಾಗ ಅಲ್ಲಿನ ಶಾಲೆಯೊಂದರಲ್ಲಿ ಜ್ಞಾನ ದೇಗುಲವಿದು ಕೈ ಮುಗಿದು ಒಳಗೆ ಬಾ ಎಂಬ ಕನ್ನಡ ನಾಮಫಲಕ ಹಾಕಿರುವುದನ್ನು ಕಂಡು ವಿದೇಶದಲ್ಲಿಯೂ ನಮ್ಮ ಭಾಷೆ ಇರುವುದನ್ನು ನೋಡಿ ನನಗೆ



ಬಹಳಷ್ಟು ಹೆಮ್ಮೆ ಮತ್ತು ಖಿಷಿ ಎನಿಸಿತು. ವಿಶ್ವ ವ್ಯಾಪಿಯಾಗಿರುವ ನಮ್ಮ ಕನ್ನಡ ಭಾಷೆಯನ್ನು ನಮ್ಮ ಮಕ್ಕಳಿಗೆ ಕಲಿಸಿಕೊಟ್ಟಾಗ ಕನ್ನಡ ಉಳಿಸಿ ಬೆಳೆಸಲು ಸಾಧ್ಯವಿದೆ. ನಿತ್ಯ ಮನೆಯಲ್ಲಿ ಕನ್ನಡವನ್ನು ಬಳಸುವಂತಾಗಬೇಕು. ಇದು ನಮ್ಮ ಅನ್ನದ ಭಾಷೆ, ನಮ್ಮ ಬದುಕಿನ ಭಾಷೆ ಎಂದುಜನ್ಮನೀಡಿದತಾಯಿಯನ್ನಪ್ರೀತಿಸಿದಂತೆ ನಮ್ಮ ಮಾತೃಭಾಷೆಯನ್ನು ಪ್ರತಿಯೊಬ್ಬರು ಪ್ರೀತಿಸಬೇಕು. ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ಹೋರಾಟದ ಜೊತೆಗೆ ಗಡಿಭಾಗದಲ್ಲಿ ಕನ್ನಡವನ್ನ ಇನ್ನಷ್ಟು ಗಟ್ಟಿಯಾಗಿ ಕಟ್ಟುವ ನಿಟ್ಟಿನಲ್ಲಿ ಶಾಲಾ ಮಕ್ಕಳಿಗೆ ಇಂತಹ ಕಾರ್ಯಕ್ರಮ ಆಯೋಜಿಸಿರುವುದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಾಸಾಹೇಬ ತೆಲಸಂಗ ಮಾತನಾಡಿ ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ನಮ್ಮ ಭಾಷೆ ವಿಶ್ವದಲ್ಲಿಯೇ ಶ್ರೀಮಂತವಾಗಿದೆ. ಸ್ವಾಭಿಮಾನದಿಂದ ನಾವೆಲ್ಲರೂಮಾತೃಭಾಷೆಯನ್ನುನಿತ್ಯಬಳಸುವ ಮೂಲಕ ಉಳಿಸಬೇಕು. ಗಡಿ ಭಾಗದಲ್ಲಿ ಇಂದು ಕನ್ನಡ ಶಾಲೆಗಳು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿ ಮುಚ್ಚುವ ಸ್ಥಿತಿಯಲ್ಲಿವೆ. ಸರ್ಕಾರ ಅವುಗಳನ್ನು ಪುನಃ ಚೇತನ ಗೊಳಿಸುವ ಕನ್ನಡ ಶಾಲೆಗಳನ್ನು ಉಳಿಸಬೇಕು.ಕರ್ನಾಟಕರಕ್ಷಣಾವೇದಿಕೆಯಿಂದ ಶುದ್ಧ ಕನ್ನಡ ಭಾಷಣ ಸ್ಪರ್ಧೆಯನ್ನು ಪ್ರಾಥಮಿಕ ವಿಭಾಗ , ಪ್ರೌಢಶಾಲಾ ವಿಭಾಗ , ಕಾಲೇಜು ವಿಭಾಗ ಎಂಬ ಮೂರು ಹಂತಗಳಲ್ಲಿ ನಡೆಸಲಾಗುತ್ತಿದೆ. ಪ್ರಾಯೋಜಕರಿಂದ ನಗದು ಬಹುಮಾನ ನೀಡಲಾಗುತ್ತಿದ್ದು, ಬರುವ ಡಿಸೆಂಬರ್ 7 ರಂದು ನಡೆಯುವ ಗಡಿನಾಡು ಕನ್ನಡ ಉತ್ಸವ ಸಮಾರಂಭದಲ್ಲಿ ಸ್ಪರ್ಧೆಯ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು ಎಂದು ಹೇಳಿದರು.

# ನಾಡಿ ಪರಿಕ್ಷೇ ಕಾರ್ಯಾಗಾರ



**ಬಾಗಲಕೋಟೆ :** ನಾಡಿ ಪರಿಕ್ಷೇ ಜನಪ್ರೀಯೆ ರೋಗ ನೀರ್ಣಯ ಸಾಧನವಾಗಿದ್ದು ಮರು ಸ್ಥಾಪಿಸುವ ಅವಶ್ಯಕತೆ ಇದೆ ಎಂದು ಡಾ.ಸಂಜಯ ಚಾಜೇಡ ಹೇಳಿದರು.

ಅವರು ಬಿ.ವಿ.ವಿ.ಸಂಘದ ಆಯುರ್ವೇಧಿಕ ಮಹಾವಿದ್ಯಾಲಯದಲ್ಲಿ ರೋಗನಿದಾನ ಹಾಗೂ ವಿಕೃತಿ ವಿಜ್ಞಾನ ವಿಭಾಗದಿಂದ ಹಮ್ಮಿಕೊಂಡ ಸ್ಪಂದನಾ 2024 ನಾಡಿ ಪರಿಕ್ಷೆ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ನಾಡಿನ ಪರೀಕ್ಷೆಗೆ ದೀರ್ಘ ಅನುಭವ ಮತ್ತು ಕೌಶಲ್ಯದ ಅಗತ್ಯವಿದೆ. ಅವು ಹಿಂದೆ ಜನಪ್ರಿಯ ರೋಗನಿರ್ಣಯ ಸಾಧನಗಳಾಗಿದ್ದವು ಆದರೆ ಇಂದು ನಿರ್ದಿಷ್ಟವಾಗಿ ಬಳಸಲಾಗುವುದಿಲ್ಲ, ಆದ್ದರಿಂದ ಭವಿಷ್ಯದಲ್ಲಿ ಅವುಗಳನ್ನು ಬಳಸಬಹುದಾದ ಫಲಿತಾಂಶಗಳನ್ನು ಮರು–ಸ್ಥಾಪಿಸುವ ಅವಶ್ಯಕತೆಯಿದೆ. ಅತ್ಯಾಧುನಿಕ ಡಯಾಗ್ನೋಸ್ಟಿಕ್ ಪರೀಕ್ಷೆಗಳ ಸಹಾಯದಿಂದ ಸಹ ಗುರುತಿಸಲಾಗದ ಹಲವಾರು ಸಮಸ್ಯೆಗಳನ್ನು ನಾಡಿಮಿಡಿತವನ್ನುಪರೀಕ್ಷಿಸುವಮೂಲಕನಿಖರವಾಗಿ ನಿರ್ಣಯಿಸಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸದ ಪಾಚಾರ್ಯ ಡಾ. ಎಮ್.ಎಸ್.ಹೀರೆಮಠ ಅವರು ನಾಡಿ ಪರೀಕ್ಷೆಯು ವ್ಯಕ್ತಿಯ ದೇಹ, ಮನಸ್ಸು, ಆತ್ಮ ಮತ್ತು ಆತ್ಮದ ಅಸ್ತಿತ್ವದಲ್ಲಿರುವಸ್ಥಿತಿಯನ್ನುಪತ್ತೆಹಚ್ಚುವಪ್ರಾಚೀನಕಲೆ ಮತ್ತು ವಿಜ್ಞಾನವಾಗಿದೆ. ಇದನ್ನು ರೋಗನಿರ್ಣಯ, ಪೂರ್ವಸೂಚಕ ಸಾಧನವಾಗಿ ಬಳಸಲಾಗುತ್ತದೆ ಎಂದರು. ವೇದಿಕೆ ಮೇಲೆ ಡಾ.ಪ್ರಕಾಶ ದೇಶಪಾಂಡೆ, ಡಾ.ಆರ್.ಆಂಹ್,ಜಂಬಗಿ,ಡಾ.ಗುರುರಾಜ ಕುಲಕರ್ಣಿ ಸೇರಿದಂತೆ ಅನೇಕರು ಇದ್ದರು.

# ಕೃಷಿ ಕ್ರಾಂತಿಯಾದಾಗ ಭಾರತ ಬಲಿಷ್ಠ: ಕೃಷಿ ವಿಜ್ಞಾನಿ ಡಾ. ಎಸ್ ಅಯ್ಯಪ್ಪನ್

**ಸಿಂದಗಿ :** ಈ ದೇಶದಲ್ಲಿ ಕೃಷಿ ಕ್ರಾಂತಿಯಾದಾಗ ಮಾತ್ರ ಭಾರತ ದೇಶ ಅತ್ಯಂತ ಬಲಿಷ್ಠ ರಾಷ್ಟ್ರವಾಗುತ್ತದೆ ಎಂದು ಖ್ಯಾತ ಕೃಷಿ ವಿಜ್ಞಾನಿ ಪದ್ಮಶ್ರೀ ಡಾ. ಎಸ್ ಅಯ್ಯಪ್ಪನ್ ಹೇಳಿದರು.

ಅವರು ಪಟ್ಟಣದ ಸಾರಂಗಮಠ ಪೂಜ್ಯಶ್ರೀ ಚನ್ನವೀರ ಮಹಾಸ್ವಾಮೀಜಿ ಪ್ರತಿಷ್ಠಾನದಿಂದ ದೇಶದ ಶ್ರೇಷ್ಠ ವಿಜ್ಞಾನಿಗಳಿಗೆ ಖ್ಯಾತ ಖಗೋಳ ತಜ್ಞ ಭಾಸ್ಕರಾಚಾರ್ಯರ–2 ಹೆಸರಿನ ಮೇಲೆ ಮಾಡುವ ಭಾಸ್ಕರ ರಾಷ್ಟ್ರೀಯ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು.

ಮುಂಬರುವ ದಿನಗಳಲ್ಲಿ ನಮಗೆ ಚಿನ್ನ ಸಿಗುತ್ತದೆ ಹೊರತು ಅನ್ನ ಸಿಗುವುದಿಲ್ಲ. ರೈತರನ್ನು ನಾವು ಯಾವತ್ತೂ ರೈತರೆಂದು ಕರೆಯಬಾರದು ಅವರು ಕೃಷಿ ಖುಷಿಗಳಾಗಿದ್ದಾರೆ.

ಕೃಷಿ ಇಲ್ಲದೆ ಬದುಕಿಲ್ಲ ಅನ್ನದಾತ ನಿಲ್ಲದೆ ಜೀವವಿಲ್ಲ. ಸರ್ಕಾರ ಸಮಾಜ ಸಂಘ ಸಂಸ್ಥೆಗಳು ಅನ್ನದಾತನಿಗೆ ಗೌರವವನ್ನು ನೀಡಬೇಕು.ಈ ದೇಶದ ಪ್ರಗತಿ ಕೃಷಿ ಮೇಲೆ ಮತ್ತು ಅನ್ನದಾತನ ಮೇಲೆ ಅವಲಂಬಿತವಾಗಿದೆ. ಎಲ್ಲ ಕ್ಷೇತ್ರಗಳಿಗಿಂತ ಕೃಷಿ ಕ್ಷೇತ್ರ ಅತ್ಯಂತ ಪವಿತ್ರವಾಗಿದೆ. ಮಣ್ಣಿನ ವಾಸನೆ ಮಣ್ಣಿನ




ಸಂಬಂಧ ಮಣ್ಣಿನ ಸಂಪರ್ಕ ನಮಗೆ ಹೆಚ್ಚಾದಷ್ಟುಬದುಕಿನಲ್ಲಿ ಹೆಚ್ಚು ಅನುಭವ ಮೂಡುತ್ತದೆ. ಮಾಧ್ಯಮ ಮತ್ತು ಸಮೂಹ ಸಂವಹನಗಳು ರೈತರಿಗೆ ಹೆಚ್ಚು ಅನುಕೂಲವನ್ನು ಮಾಡಿಕೊಡುವುದರಿಂದ ಇಂದು ರೈತ ಅತ್ಯಂತ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದ್ದಾನೆ. ಬರುವ ಬದಲಾವಣೆಯಾಗುತ್ತಿರುವ ವಾತಾವರಣದ ಏರುಪೇರುಗಳ ಮಧ್ಯದಲ್ಲಿ ಅನ್ನದಾತ ಅತ್ಯಂತ ಸಂಕಷ್ಟಕ್ಕೆ ಸಿಲುಕುತ್ತಿದ್ದಾನೆ. ಈ ದೇಶದ ಪ್ರತಿ ಕೃಷಿ ವಿಶ್ವವಿದ್ಯಾಲಯಗಳು ಅನ್ನ ದೇಗುಲವಾಗಿ ಕಾರ್ಯನಿರ್ವಹಿಸುತ್ತಿವೆ. ನಿಮ್ಮ ಮಕ್ಕಳನ್ನು ಹೆಚ್ಚು ಹೆಚ್ಚು ಕೃಷಿ ಜ್ಞಾನ ಮತ್ತು ಆ ಕ್ಷೇತ್ರದ ಕಡೆಗೆ ಕ್ಷೇತ್ರದ ಕಡೆಗೆ ಗಮನಹರಿಸುವಂತೆ ಮಾಡಬೇಕಾಗಿದ್ದು ಅತ್ಯಂತ ಮುಖ್ಯವಾಗಿದೆ ಎಂದರು.

ಈ ವೇಳೆ ಕೊಡಗು ವಿಶ್ವವಿದ್ಯಾಲಯದ ಕುಲಪತಿ ಡಾ. ಅಶೋಕ್ ಆಲೂರ್ ಮಾತನಾಡಿ, ಕೃಷಿ ವಿಜ್ಞಾನಿ ಡಾ. ಎಸ್. ಅಯ್ಯಪ್ಪನ್ ಅವರು ಕೃಷಿ ಕ್ಷೇತ್ರದ ಸದ್ಗುರುವಾಗಿ ಅನೇಕ ರೈತರ ಬಾಳನ್ನ ಬೆಳಗಿ ಮಾರ್ಗದರ್ಶನ ನೀಡಿದವರು. ಈ ಕ್ಷೇತ್ರದಲ್ಲಿ ಅವರು ಪರುಷ ಲೋಹವಾಗಿ ಕಾರ್ಯನಿರ್ವಹಿಸಿದ್ದಾರೆ. ಸಿಂದಗಿ ಸಾರಂಗಮಠ ಅವರನ್ನು ಗುರುತಿಸಿ ಭಾಸ್ಕರ ರಾಷ್ಟ್ರೀಯ ಪ್ರಶಸ್ತಿ ನೀಡುತ್ತಿರುವುದು ಕೃಷಿ ಕ್ಷೇತ್ರದ ದೊಡ್ಡ ಶಕ್ತಿಗೆ ನೀಡಿದಂತಹ ಪ್ರಶಸ್ತಿಯಾಗಿದೆ ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ಕೃಷಿ ವಿಶ್ವವಿದ್ಯಾಲಯದ ಡಾ. ಭೀಮಪ್ಪ, ಕೃಷಿ ವಿಜ್ಞಾನಿ ಡಾ. ಎಸ್. ಅಯ್ಯಪ್ಪನ್ ಅವರ ಧರ್ಮಪತ್ನಿ ಉಮಾ ಅಯ್ಯಪ್ಪನ್ ಮಾತನಾಡಿದರು.

ಸಮಾರಂಭದ ಸಾನಿಧ್ಯ ವಹಿಸಿದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯರು ಆಶೀರ್ವಚನ ನೀಡಿದರು.

ವೇದಿಕೆ ಮೇಲೆ ಕೊಣ್ಣೂರು ಹೊರಗಿನ ಕಲ್ಯಾಣ ಮಠದ ಡಾ. ವಿಶ್ವ ಪ್ರಭುದೇವ ಶಿವಾಚಾರ್ಯರು, ಕನ್ನೊಳ್ಳಿ ಹಿರೇಮಠದ ಸಿದ್ದಲಿಂಗ ಶಿವಾಚಾರ್ಯರು, ಶಾಸಕ ಅಶೋಕ್ ಮನಗೂಳಿ, ಮಾಜಿ ಶಾಸಕರಾದ ರಮೇಶ್ ಭೂಸನೂರ್, ಅರುಣ್ ಶಹಾಪುರ್, ಡಾ. ರವೀಂದ್ರ ಬೆಳ್ಳಿ, ಡಾ. ಬಿ ಎನ್.ಮೋಟಗಿ, ಡಾ. ಅಶೋಕ್ ಸಜ್ಜನ್, ವಿವೇಕಾನಂದ ಸಾಲಿಮಠ, ಸಂಸ್ಥೆಯ ನಿರ್ದೇಶಕರಾದ ಅಶೋಕ್ ವಾರದ್, ಅಶೋಕ್ ಮಸಳಿ, ಗಂಗಾಧರ್ ಜೋಗುರ್ ಹ.ಮ.ಪೂಜಾರಿ, ಡಾ. ಬಿ. ಜಿ. ಮಠ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಾ. ರವಿ ಗೋಲಾ ಮತ್ತು ಪೂಜಾ ಹಿರೇಮಠ್ ನಿರೂಪಿಸಿದರು. ಡಾ ಶರಣಬಸವ ಜೋಗುರ್ ಸ್ವಾಗತಿಸಿದರು.

# ರಾಜ್ಯ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯ




**ವಿಜಯಪುರ :** ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ರಾಜ್ಯ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯು ನಗರದ ಬಿ.ಎಲ್.ಡಿ.ಇ. ಸಂಸ್ಥೆಯ ಎವಿಎಸ್ ಆಯುರ್ವೇದ ಮಹಾವಿದ್ಯಾಲಯದಲ್ಲಿ ಬುಧವಾರ ನಡೆಯಿತು.

ಮಹಾವಿದ್ಯಾಲಯದ ವತಿಯಿಂದ ಸಂಘಟಿಸಲಾಗಿರುವ ಈ ಪಂದ್ಯಾವಳಿಯನ್ನು ಬಿ.ಎಲ್.ಡಿ.ಇ ಸಂಸ್ಥೆಯ ಹಿರಿಯ ಕ್ರೀಡಾ ನಿರ್ದೇಶಕ ಎಸ್. ಎಸ್. ಕೋರಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ರಾಜೀವ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವೀಕ್ಷಕ ಮತ್ತು ದಾವಣಗೆರೆ ಅರ್ಜುನ ಜೆ. ಜೆ. ಎಂ ನಸಿರ್‌ಂಗ ಕಾಲೇಜಿನ ಡಾ. ಸುರೇಶ. ಎಸ್. ಎಂ., ವಿಜಯಪುರ ಬಿ.ಎನ್.ಎಸ್ ಆಯುರ್ವೇದ ಕಾಲೇಜಿನ ನಜೀರ ಮಮದಾಪುರ, ಎವಿಎಸ್ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಸಂಜಯ ಕಡ್ಲಿಮಟ್ಟಿ ಈ ಸಂದರ್ಭದಲ್ಲಿ ಡಾ. ಗಂಗಾಧರ ತಿಮ್ಮಾಪುರ, ಡಾ. ಜೋಸ್ನಾ ಬರಗಿ, ಹನುಮಂತ ಪವಾರ ಉಪಸ್ಥಿತರಿದ್ದರು.

ಈ ಪಂದ್ಯಾವಳಿಯಲ್ಲಿ ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯ ಅಡಿಯಲ್ಲಿ ಬರುವ ವೈದ್ಯಕೀಯ, ದಂತ ಆಯುರ್ವೇದ, ಹೊಮಿಯೋಪತಿ, ಯುನಾನಿ, ಫಾರ್ಮಸಿ, ನಸಿರ್‌ಂಗ್ ಮುಂತಾದ ಆರೋಗ್ಯ ವಿಜ್ಞಾನ ವಿದ್ಯಾಲಯಗಳ ರಾಜ್ಯಾದ್ಯಂತ ಪುರುಷರ ಎಂಟು ಮತ್ತು ಮಹಿಳೆಯರ ಏಳು ತಂಡಗಳು ಭಾಗವಹಿಸಿವೆ.

# ಬಿಎಸ್‌ವೈ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ

**ಬೀಳಗಿ :** ರಾಜ್ಯದಲ್ಲಿ ನೆಡೆದಿರುವ ಮೂರು ಉಪಚುನಾವಣೆಯಲ್ಲಿ ಅಭೂತ ಪೂರ್ವ ಗೆಲವು ಸಾಧಿಸಿ ಶಾಸಕರಿಗೆ, ಜನರಿಗೆ ಬೂಸ್ಟರ್ ಡೋಸ್ ನೀಡಿದ ಫಲಿತಾಂಶ ಇದಾಗಿದ್ದು ಕಾಂಗ್ರೆಸ ಪಕ್ಷ ಮೂರು ಗೆಲವು ಎಂದಿಗೂ ಮರೆಯುವಂತಿಲ್ಲ, ಚುನಾವಣೆ ಸಂದರ್ಭದಲ್ಲಿ ಯಡ್ಯೂರಪ್ಪನವರು ಬಿಜೆಪಿ ಮೂರುಕ್ಷೇತ್ರಗೆಲ್ಲುತ್ತೆ,ಸಿದ್ದರಾಮಯ್ಯನವರು ತಮ್ಮ ಸ್ಥಾನಕ್ಕೆ ರಾಜೀನಾಮೆಯನ್ನು ನೀಡಿ ರಾಜಕೀಯ ನಿವೃತ್ತಿ ಪಡೆಯಬೇಕು ಎಂದು ಬಹಿರಂಗವಾಗಿ ಹೇಳಿದ್ದರು ಆದರೆ ಗೆದ್ದಿರುವುದು ಕಾಂಗ್ರೆಸ ಪಕ್ಷ ಅದಕ್ಕಾಗಿ ಯಡ್ಯೂರಪ್ಪನವರು ಕೂಡಲೇ ತಮ್ಮೆಲ್ಲ ಸ್ಥಾನಗಳಿಗೆ ರಾಜೀನಾಮೆ ನೀಡಿ ರಾಜಕೀಯ ನಿವೃತ್ತಿ ಪಡೆಯಬೇಕು ಎಂದು ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷ, ಶಾಸಕ ಜೆ ಟಿ ಪಾಟೀಲ ಒತ್ತಾಯಿಸಿದರು.

ಪಟ್ಟಣದ ಸಿದ್ದೇಶ್ವರ ಸೌಹಾರ್ದ ಸಹಕಾರಿ ಸಂಘದ ಸಭಾಭವನದಲ್ಲಿ ಕರೆಯಲಾಗಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಚುನಾವಣೆ ಮುನ್ನಾಸಿಎಂ ಸಿದ್ದರಾಮಯ್ಯನವರುಮುಡಾಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎಂದು ಸುಳ್ಳು ಆರೋಪಗಳೊಂದಿಗೆ ಸುಖಾಸುಮ್ಮನೆ ಆರೋಪ ಮಾಡಿದ್ದು, ಜತೆಗೆ ವಕ್ಫ್ ಆಸ್ತಿ



ವಿಚಾರದಲ್ಲಿ ಬಿಜೆಪಿ ಮಾಡಿದ ತಪ್ಪನ್ನು ಕಾಂಗ್ರೆಸ್‌ಮೇಲೆಹಾಕುವಹುನ್ನಾರನೆಡೆದಿದೆ ಎಂಬುವುದು ಜಗತ್ತ ಜಾಹಿರವಾಗಿದೆ, ಉಪಚುನಾವಣೆ ಫಲಿತಾಂಶ ನಾಡಿನ ಜನರು ಕಾಂಗ್ರೆಸ್ ಪಕ್ಷದ ಸರಕಾರವನ್ನು ಒಪ್ಪಿಕೊಂಡು ಸರಕಾರದ ಪರವಾಗಿ ನಾವಿದ್ದೇವೆ ಎಂದು ತೋರಿಸಿದ್ದಾರೆ, ಸುಳ್ಳೆ ಮನೆದೇವರು ಎಂದು ನಂಬಿರುವ ಬಿಜೆಪಿ ಪಕ್ಷದವರು ಅಲ್ಪಸಂಖ್ಯಾತರನ್ನು ಗುರಿಯಾಗಿಸುವ ನಿಟ್ಟಿನಲ್ಲಿ ಸಾಕಷ್ಟು ವಿಷಯಗಳನ್ನು ವಿಷಾಂತರ ಮಾಡಿದ್ದು ಅಲ್ಲದೆ ರಾಜ್ಯದಲ್ಲಿ ಕಾಂಗ್ರೆಸ ಸರಕಾರದ ಗ್ಯಾರಂಟಿ ಯೋಜನೆ ಜತೆಗೆ ಅಬಿವೃದ್ಧಿ ಕಾರ್ಯಗಳನ್ನು ಗಮನಿಸಿ ಸಹಿಸಿಕೊಳ್ಳುವ ಶಕ್ತಿ ಅವರಿಗಿಲ್ಲ, ಬಿಜೆಪಿಯವರು ಅವರ ಕೈಯಿಂದ ಏನು ಮಾಡಬೇಕು ಅವೆಲ್ಲವನ್ನು ಸುಳ್ಳು ಅಪ್ರಾಮಾಣಿಕರಾಗಿ ಆರೋಪ ಮಾಡುತ್ತಾ ಬಂದಿದ್ದು ಜತೆಗೆ ಕೇಂದ್ರ ಸರಕಾರವು ಸುಳ್ಳು ಆರೋಪಗಳಿಗೆ ಪುಷ್ಠಿ ನೀಡಿ ದೇಶದ ಅಭಿವೃದ್ಧಿ ಕಡೆಗಣಿಸುತ್ತಿದೆ, ವಕ್ಫ್ ವಿಚಾರದಲ್ಲಿ ಕಳೆದ ಬಿಜೆಪಿ ಸರಕಾರದ ಅವಧಿಯಲ್ಲಿ 2900 ಎಕರೆ ಜಮೀನುಗಳಿಗೆ ನೋಟಿಸ ನೀಡಲಾಗಿದೆ ಮತ್ತು ಕಾಂಗ್ರೆಸ್ ಪಕ್ಷ ಅವಧಿಯಲ್ಲಿ ಕೇವಲ 300 ಎಕರೆ ಆಸ್ತಿಗಳಿಗೆ ನೋಟಿಸ್ ನೀಡಲಾಗಿದೆ, ವಕ್ಫ್ ಆಸ್ತಿ ವಿಚಾರದಲ್ಲಿ ಅತಿ ಹೆಚ್ಚು ಆಸ್ತಿಗಳಿಗೆ ನೋಟಿಸ್ ನೀಡಿದ್ದ ಬಿಜೆಪಿ ಸರಕಾರ ಈವಾಗ ಕಾಂಗ್ರೆಸ್ ಪಕ್ಷದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿರುವುದು ಜನರಿಗೆ ಅರ್ಥವಾಗಿವೆ ಎಂದು ಅಕ್ರೋಶ ವ್ಯಕ್ತಪಡಿಸಿದರು.

ಬೀಳಗಿ ಪಪಂ 1 ಸ್ಥಾನ ಕಾಂಗ್ರೆಸ ತೆಕ್ಕೆಗೆ ?

ಬೀಳಗಿ ಪಟ್ಟಣ ಪಂಚಾಯತ ವ್ಯಾಪ್ತಿಯ ವಾರ್ಡ ನಂ 3 ರ ಉಪಚುನಾವಣೆ ಫಲಿತಾಂತ ದಿ 26 ರಂದು ಬಂದಿದ್ದು ಕಳೆದ 40 ವರ್ಷಗಳಿಂದ ದಳ, ಬಿಜೆಪಿ ತೆಕ್ಕೆಯಲ್ಲಿದ್ದ ಈ ವಾರ್ಡಿನಲ್ಲಿ ಈ ಭಾರಿ ಕಾಂಗ್ರೆಸ್ ಅಭ್ಯರ್ಥಿ ರಾಜು ಬೋರ್ಜಿ ಅವರು ಅಭೂತಪೂರ್ವ ಗೆಲವು ಸಾಧಿಸಿ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ವರ್ಚಸ್ಸು ಜತೆಗೆ ಅಭಿವೃದ್ಧಿ ಕಾರ್ಯಗಳು ಹೆಚ್ಚುವಂತೆ ಮಾಡಿದ್ದಾರೆ, ಪಕ್ಷ ಮೂರು ಉಪಚುನಾವಣೆ ಮತ್ತು ಬೀಳಗಿ ಪಪಂ ಉಪಚುನಾವಣೆಯಲ್ಲಿ ಗೆದ್ದು ಜನಪರವಾಗಿದ್ದೇವೆ ಎಂದು ಸಾಬೀತು ಮಾಡಿದ್ದು ಇವೆಲ್ಲಕ್ಕೂ ಕಾರಣರಾದ ಸಿಎಂ, ಡಿಸಿಎಂ ಮತ್ತು ಸಚಿವ ಸತೀಶ ಜಾರಕಿಹೊಳಿ ಅವರು ಸೇರಿದಂತೆ ಎಲ್ಲ ಮುಖಂಡರಿಗೆ ಬೆಂಗಳೂರಿನಲ್ಲಿ ಗೌರವ ಸನ್ಮಾನ ನೆರವೇರಿಸಿ ಇನ್ನು ಪಕ್ಷ ಬಲವರ್ಧನೆಯ ಕೆಲಸವನ್ನು ಮಾಡುವ ಶಕ್ತಿ ನೀಡಲೆಂದು ಕೇಳಿಕೊಳ್ಳುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ ಕಾಂಗ್ರೆಸ್‌ಅಧ್ಯಕ್ಷ ಹಣಮಂತ ಕಾಖಂಡಕಿ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕಾ ಅಧ್ಯಕ್ಷ ಅಣವೀರಯ್ಯ ಪ್ಯಾಟಿಮಠ. ಸಿದ್ದ ಸಾರಾವರಿ, ಬಸವರಾಜ ಹಳ್ಳದಮನಿ ಸೇರಿದಂತೆ ಇತರರು ಇದ್ದರು.

# ಬಡವರ ಮಕ್ಕಳು ಸಹ ಉನ್ನತ ಹುದ್ದೆಗೇರುವ ಅವಕಾಶ ನೀಡಿದ್ದೇ ಭಾರತ ಸಂವಿಧಾನ

**ವಿಜಯಪುರ** : ಬಡ ತಾಯಿಯ ಮಗನೊಬ್ಬ ಜಿಲ್ಲಾಧಿಕಾರಿಯಾಗುವ ಕನಸು ಕಾಣುವುದಕ್ಕೆ ಹಾಗೂ ಕಂಡಂತಹ ಕನಸನ್ನು ನನಸು ಮಾಡಿಕೊಳ್ಳುವುದಕ್ಕೆ ಸಾಧ್ಯವಾಗಿಸಿದ್ದು ಭಾರತದ ಸಂವಿಧಾನ. ಜಗತ್ತಿನ ಶ್ರೇಷ್ಠ ಸಂವಿಧಾನ ಎಂದು ಗುರುತಿಸಿಕೊಳ್ಳುವ ನಮ್ಮ ಸಂವಿಧಾನ ಇಲ್ಲದೇ ಹೋಗಿದ್ದರೆ ಈ ದೇಶದ ಸ್ಥಿತಿ ಪಾತಾಳ ಗರಿಡಿಯಂತಾಗುತ್ತಿತ್ತು ಎಂದು ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಅಧ್ಯಕ್ಷ ಬಸವರಾಜ ಕೌಲಗಿ ಹೇಳಿದರು.



ನಗರದ ಎಕ್ಸಲಂಟ್ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಸಂವಿಧಾನ ದಿನದ ಪ್ರಯುಕ್ತ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಒಂದು ದೇಶದ ಆಡಳಿತ ಸೂತ್ರ ಹೇಗಿರಬೇಕು, ದೇಶದ ಪ್ರಜೆಗಳಿಗೆ ಯಾವ ರೀತಿಯ ಹಕ್ಕುಗಳಿರಬೇಕು. ಹಕ್ಕುಗಳಿಗೆ ಪ್ರತಿಯಾಗಿ ಎಂಥಹ ಕರ್ತವ್ಯಗಳನ್ನು ನಾವು ಮಾಡಬೇಕು ಎನ್ನುವುದನ್ನು ತಿಳಿಸಿಕೊಡುವ ಭಾರತೀಯ ಸಂವಿಧಾನ ಜಗತ್ತು ಕಂಡಂತಹ ಅತ್ಯುತ್ತಮವಾದ ಸಂವಿಧಾನ ಎಂದು ಗುರುತಿಸಿಕೊಳ್ಳುತ್ತದೆ ಎಂದರು.

ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಬೇರೆ ಬೇರೆ ದೇಶಗಳ ಸಂವಿಧಾನಗಳನ್ನು ಓದಿ ಅರ್ಥೈಸಿಕೊಂಡು ನಮ್ಮ ದೇಶಕ್ಕೆ ಎಂಥಹ ಸಂವಿಧಾನ ಬೇಕು ಎನ್ನುವುದನ್ನು ತಿಳಿಸಿಕೊಟ್ಟರು. ಅಸ್ಪೃಶ್ಯತೆಯ ಬೆಂಕಿಯಲ್ಲಿ ಸ್ವತಃ ಬೆಂದಿದ್ದ ಬಾಬಾಸಾಹೇಬರು ಭಾರತದ ಸಂವಿಧಾನ ರಚನೆಯಲ್ಲಿ ಅತ್ಯಂತ ಪ್ರಮುಖ ಪಾತ್ರವನ್ನು ನಿಭಾಯಿಸುವುದರೊಂದಿಗೆ ಸಮಾನತೆಯ ಸಂವಿಧಾನ ಜಾರಿಯಾಗುವುದಕ್ಕೆ ಕಾರಣರಾದರು. ಇಷ್ಟು ಅದ್ಭುತವಾದ ಸಂವಿಧಾನವನ್ನು ಪಡೆದುಕೊಂಡಿದ್ದರೂ ಸಹ ಅದರ ಆಶಯವನ್ನು ಪೂರ್ಣಗೊಳಿಸುವಲ್ಲಿ ಭಾರತೀಯರು ಇನ್ನೂ ಯಶಸ್ವಿಯಾಗುತ್ತಿಲ್ಲ ಎಂದು ಖೇದ ವ್ಯಕ್ತಪಡಿಸಿದರು.

ಇತ್ತೀಚೆಗೆ ಲಂಡನ್‌ನಲ್ಲಿ ಜರುಗಿದ ಪಾರ್ಲಿಮೆಂಟ್ ನಾಯಕತ್ವ ಶೃಂಗ ಸಭೆಯಲ್ಲಿ ಪಾಲ್ಗೊಂಡು ಭಾರತಕ್ಕೆ ಆಗಮಿಸಿದ ವಿಚಾರಗಳನ್ನು ಹಂಚಿಕೊಂಡ ಅವರು, ಒಂದು ಕಾಲದಲ್ಲಿ ಭಾರತವನ್ನು ಬ್ರಿಟಿಷರು ಆಳ್ವಿಕೆ ಮಾಡಿದ್ದರು. ಭಾರತೀಯರನ್ನು ಕೊಳ್ಳೆ ಹೊಡೆದು ಇಂಗ್ಲಂಡನ್ನು ಶ್ರೀಮಂತ ಮಾಡಿದರು. ಆದರೆ ಬದಲಾದ ಕಾಲಘಟ್ಟಕ್ಕೆ ಅನುಗುಣವಾಗಿ ಆ ದೇಶವನ್ನು ಆಳುವ ಕೆಲಸ ಭಾರತೀಯರು ಮಾಡುತ್ತಿದ್ದಾರೆ. ಭಾರತೀಯ ಮೂಲದವರು ಬ್ರಿಟನ್ ಪ್ರಧಾನಿಯಾಗಿ, ಸಂಸತ್ ಸದಸ್ಯರಾಗಿ, ಕಾರ್ಪೋರೇಟರ‍್ಗಳಾಗಿ ಆ ದೇಶದಲ್ಲಿ ಆಳ್ವಿಕೆ ಮಾಡುತ್ತಿದ್ದಾರೆ. ಇದನ್ನು ನೋಡಿದರೆ ಮುಂದಿನ ದಿನಗಳಲ್ಲಿ ಭಾರತ ವಿಶ್ವಗುರುವಾಗಿ ಮತ್ತೆ ತಲೆ ಎತ್ತುವುದರಲ್ಲಿ ಎರಡು ಮಾತಿಲ್ಲ. ಹಾಗಾಗಬೇಕಾದರೆ ಭಾರತ ಸಂವಿಧಾನ ನಮಗೆ ನೀಡಿರುವ ಅವಕಾಶಗಳನ್ನು ಸ್ವಾರ್ಥ ಸಾಧನೆಗೆ ಬಳಸಿಕೊಳ್ಳದೆ, ಸಮಾಜ ಸುಧಾರಣೆಗೆ, ದೇಶದ ಅಭಿವೃದ್ಧಿಗೆ, ಸಂವಿಧಾನದ ಆಶಯಗಳ ಈಡೇರಿಕೆಗೆ ಬಳಸಿಕೊಂಡಿದ್ದೇ ಆದಲ್ಲಿ ಇಡೀ ಜಗತ್ತಿಗೆ ಭಾರತ ಹಿರಿಯಣ್ಣನಾಗುತ್ತಾನೆ. ಆಳ್ವಿಕೆ ಮಾಡಿದ ರಾಷ್ಟ್ರಗಳೆಲ್ಲ ಕೈ ಕಟ್ಟಿ ನಿಲ್ಲುತ್ತವೆ. ಆ ನಿಟ್ಟಿನಲ್ಲಿ ನಮ್ಮ ಯುವಕರು ಪ್ರಯತ್ನಿಸಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ನವಜೀವನ ಬ್ಯಾಂಕ್‌ನ ಮ್ಯಾನೇಜರ್ ವಿ.ಡಿ. ಮಾದನಶೆಟ್ಟಿ, ಪ್ರಾಚಾರ್ಯ ಶ್ರೀಕಾಂತ ಕೆ.ಎಸ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸ್ವದೇಶಕ್ಕೆ ಆಗಮಿಸಿದ ಬಸವರಾಜ ಕೌಲಗಿ ಅವರನ್ನು ಎಕ್ಸಲಂಟ್ ಕಾಲೇಜಿನ ಸರ್ವ ಸಿಬ್ಬಂದಿ ಬಳಗ, ವಿದ್ಯಾರ್ಥಿ ನಿಲಯದ ನಿಲಯಪಾಲಕರು ಸನ್ಮಾನಿಸಿ ಅಭಿನಂದಿಸಿದರು. ವಿದ್ಯಾರ್ಥಿನಿ ಶೃತಿ ವಾಲೀಕಾರ ಪ್ರಾರ್ಥಿಸಿದರು, ಉಪನ್ಯಾಸಕ ರಮೇಶ ಬಾಗೇವಾಡಿ ಸ್ವಾಗತಿಸಿದರು. ಶರಣಗೌಡ ಪಾಟೀಲ ನಿರೂಪಿಸಿದರು, ರವಿ ಕಲ್ಲೂರಮಠ ವಂದಿಸಿದರು.

# ಲಾಡ್ಜ್‌ನಲ್ಲಿ ವೇಶ್ಯಾವಾಟಿಕೆ: ಮೂವರು ವಶಕ್ಕೆ

**ವಿಜಯಪುರ** : ಅಕ್ರಮವಾಗಿ ವೇಶ್ಯಾವಾಟಿಕೆ ನಡೆಸುತ್ತಿದ್ದ ಜಿಲ್ಲೆಯ ತಾಳಿಕೋಟೆ ಪಟ್ಟಣದ ಲಾಡ್ಜ್ ಮೇಲೆ ಪೊಲೀಸರು ದಾಳಿ ನಡೆಸಿ ಮೂವರನ್ನು ವಶಕ್ಕೆ ಪಡೆದಿದ್ದು, ಇಬ್ಬರು ಮಹಿಳೆಯರನ್ನು ಮಹಿಳಾ ಸಾಂತ್ವನ ಕೇಂದ್ರಕ್ಕೆ ಸೇರಿಸಲಾಗಿದೆ.

ವೇಶ್ಯಾವಾಟಿಕೆ ನಡೆಸುತ್ತಿದ್ದ ಲಾಡ್ಜ್ ಮೇಲೆ ಪೊಲೀಸರು ದಾಳಿ ಮಾಡಿ ಲಾಡ್ಜ್ ಮ್ಯಾನೇಜರ್ ಸೇರಿದಂತೆ ಮೂವರನ್ನು ವಶಕ್ಕೆ ಪಡೆದು ಪೊಲೀಸರು ಹೆಚ್ಚಿನ ವಿಚಾರಣೆ ನಡೆಸಿದ್ದಾರೆ. ವಿಜಯಪುರ ಜಿಲ್ಲೆಯ ತಾಳಿಕೋಟೆ ಪಟ್ಟಣದ ಲಾಡ್ಜ್ ನಲ್ಲಿ ಅಕ್ರಮವಾಗಿ ವೇಶ್ಯಾವಾಟಿಕೆ ನಡೆಯುತ್ತಿರುವ ಬಗ್ಗೆ ಖಚಿತ ಮಾಹಿತಿ ಆಧರಿಸಿ ತಾಳಿಕೋಟೆ ಪೊಲೀಸರು ಡಿವೈ ಎಸ್ ಪಿ ಬಲ್ಲಪ್ಪ ನಂದಗಾವಿ ನೇತೃತ್ವದಲ್ಲಿ ದಾಳಿ ಮಾಡಿದ್ದಾರೆ. ದಾಳಿ ವೇಳೆ ಶರಣು ನಾಗಪ್ಪ ನಾಲತವಾಡ,(46) ಶರಣಪ್ಪಶಿವಪ್ಪಬಳೂಲಗಿ(55),ಶಿವಯ್ಯಶಾಂತಯ್ಯಾ ಮದ್ದಾಲಿ(29)ಎಂಬುವರನ್ನವಶಕ್ಕೆಪಡೆಯಲಾಗಿದ್ದು. ಅನೈತಿಕ ಚಟುವಟಿಕೆಯಲ್ಲಿ ಭಾಗಿಯಾದ ಇಬ್ಬರು ಮಹಿಳೆಯರನ್ನು ಮಹಿಳಾ ಸಾಂತ್ವನ ಕೇಂದ್ರಕ್ಕೆ ಕಳಿಸಲಾಗಿದೆ. ಈ ಕುರಿತು ತಾಳಿಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬುದ್ಧ ಗಯಾ ಸಂಪೂರ್ಣ ಅಧಿಕಾರ ಬೌದ್ಧರಿಗೆ ನೀಡಲು ಒತ್ತಾಯಿಸಿ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಕೆ

**ವಿಜಯಪುರ:** ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ ವಾದ) ಜಿಲ್ಲಾ ಸಮಿತಿ, ವಿಜಯಪುರ ವತಿಯಿಂದ ಬಿ.ಟಿ. ಆಕ್ಟ್ 1949 ಕಾಯ್ದೆಯನ್ನು ರದ್ದು ಪಡಿಸಲು ಆಗ್ರಹಿಸಿ ಜಿಲ್ಲಾಧಿಕಾರಿ ಟಿ ಭೂಬಾಲನ್ ಅವರ ಮೂಲಕ ಬುಧವಾರ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.



ಇದೇ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದ ಜಿಲ್ಲಾ ಸಮಿತಿ ಪ್ರಧಾನ ಸಂಚಾಲಕ ಸಂಜು ಕಂಬಾಗಿ ಮಾತನಾಡಿ, ಗಯಾ ಜಗತ್ತಿನ ಬೌದ್ಧರಿಗೆಲ್ಲ ಪರಮ ಪವಿತ್ರವಾದ ಸ್ಥಳ. ರಾಜಕುಮಾರ ಸಿದ್ಧಾರ್ಥ ಬೋಧಿಜ್ಞಾನಪಡೆದುಭಗವಾನ್ ಬುದ್ಧನಾದ ಪಾವನ ಸ್ಥಳ. ಈ ಕ್ಷೇತ್ರ ಬುದ್ಧನ ಕಾಲದಿಂದಲೂ ಪೂಜನೀಯವಾಗಿದೆ. ಸಾಮ್ರಾಟ್ ಅಶೋಕನು ಸೇರಿ ಈ ದೇಶದ ಅನೇಕ ರಾಜ ಮಹಾರಾಜರು ಮತ್ತು ಬರ್ಮಾ, ಶ್ರೀಲಂಕಾ, ಥೈಲಾಂಡ್, ಜಪಾನ್ ಮತ್ತು ಇನ್ನಿತರ ದೇಶಗಳ ರಾಜರು ಹಾಗೂ ಬೌದ್ಧ ಉಪಾಸಕರು ಈ ಕ್ಷೇತ್ರ ವೃದ್ಧಿಗಾಗಿ ಶ್ರದ್ಧಾಪೂರ್ವಕ ಕೊಡುಗೆ ನೀಡಿರುವುದು ಇತಿಹಾಸ. ಭಾರತದಲ್ಲಿ ಹುಟ್ಟಿ ಏಷ್ಯಾ ಖಂಡದ ಎಲ್ಲಾ ದೇಶಗಳಲ್ಲಿ ಪ್ರಪಂಚದಾದ್ಯಂತ ವಿಜೃಂಭಿಸಿದೆ. ಏಷ್ಯದ ಬೆಳಕು ಎಂದು ಪ್ರಖ್ಯಾತವಾದ ಬೌದ್ಧ ಧರ್ಮ ಕಾಲಾನುಕ್ರಮದಲ್ಲಿ ಮಾತ್ರ ಭೂಮಿಯಲ್ಲಿ ಮುಸ್ಲಿಂ ಮತ್ತು ಹಿಂದೂಗಳ ಆಕ್ರಮಣಕ್ಕೆ ತುತ್ತಾಗಿ ಕಣ್ಮರೆಯಾಯಿತು ಎಂದರು.

ಪ್ರಬುದ್ಧ ಭಾರತದ ಮಹಾಬೋಧಿ ಮಹಾವಿಹಾರದ ಮುಕ್ತಿ ಆಂದೋಲವನ್ನು 1992 ರಂದು ಬಂದ ಆರ್ಯ ನಾಗಾರ್ಜುನ ಸುರೈ ಸಸಾಯಿಯವರ ನೇತೃತ್ವದಲ್ಲಿ ಅಂಬೇಡ್ಕರ್ ಆನುಯಾಯಿಗಳು ಮುಂದುವರೆಸಿದರು. ರಾಷ್ಟ್ರ ಮಟ್ಟದಲ್ಲಿ ಹಲವು ಸುತ್ತಿನ ಹೋರಾಟಗಳು ಜರುಗಿದವು, ಬಿ.ಟಿ. ಆಕ್ಟ 1949 ರ ಕಾಯ್ದೆಯಲ್ಲಿ ಹಾಗೂ ಬಿಟಿಎಂಸಿಯಲ್ಲಿ ಕೆಲವು ಬದಲಾವಣೆಗಳು ಆದವೇ ಹೊರತು ಸಂಪೂರ್ಣ ರದ್ದು ಆಗಲಿಲ್ಲ. ಈ ಸಂಬಂಧ ಕಳೆದ 15 ವರ್ಷಗಳಿಂದ ಬೌದ್ಧರು ನಡೆಸಿದ ಕಾನೂನು ಹೋರಾಟಕ್ಕೆ ಇನ್ನೂ ಜಯ ಸಿಕ್ಕಿಲ್ಲ . ಪ್ರಸ್ತುತ ಅಖಿಲ ಭಾರತ ಬೌದ್ಧ ವೇದಿಕೆ ಎಲ್ಲಾ ವಿಚಾರಧಾರೆಯ ಬೌದ್ಧ ಸಂಘ ಸಂಸ್ಥೆಗಳನ್ನು ಹಾಗೂ ದೇಶದ ಅಂಬೇಡ್ಕರ್ ಅನುಯಾಯಿಗಳನ್ನು ಒಂದೇ ವೇದಿಕೆಗೆ ತಂದು ಹೋರಾಟವನ್ನು ಆರಂಭಿಸಿದೆ ಎಂದು ಹೇಳಿದರು.

ರಾಜ್ಯ ಮಹಿಳಾ ಸಂಘಟನಾ ಸಂಚಾಲಕಿ ಪ್ರತಿಭಾ ಹೊಸಮನಿ ಮಾತನಾಡಿ, ಈ ದೇಶದ ಬೌದ್ಧ ಸಮುದಾಯ ಮತ್ತು ಅಂಬೇಡ್ಕರ್ ಅನುಯಾಯಿಗಳು ಸಂವಿಧಾನದತ್ತಧಾರ್ಮಿಕಅವಕಾಶಗಳಿಂದ ವಂಚಿತರಾಗಿದ್ದಾರೆ.

ಬಿ.ಟಿ. ಆಕ್ಟ್ 1949 ನ್ನು ರದ್ದುಪಡಿಸಿ ಬುದ್ಧಗಯಾದ ಮಹಾಬೋಧಿ ಮಹಾವಿಹಾರದಆಡಳಿತಸಂಪೂರ್ಣವಾಗಿ ಬೌದ್ಧರಿಗೆ ನೀಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮಹಿಳಾ ಒಕ್ಕೂಟ ಜಿಲ್ಲಾ ಸಂಚಾಲಕಿ ಕವಿತಾ ವಗ್ಗರ, ಜಿಲ್ಲಾ ಸಂಘಟಕರಾದ ಯಲ್ಲಪ್ಪ ಕಾಂಬಳೆ, ಚೈತನ ತೊರವಿ ಜಿಲ್ಲಾ ಸಂಘಟನಾ ಸಂಚಾಲಕ ಶಂಕರ ಚಲವಾದಿ, ನಗರ ಸಂಚಾಲಕ ನಕುಶಾ ಹೊಸಮನಿ, ಪ್ರದೀಪ ಚಲವಾದಿ, ಭೀಮಣ್ಣ ಹಂಚಿನಾಳ, ಸುರೇಶ ಬಬಲೇಶ್ವರ, ಭಾಸ್ಕರ ಬೋರಗಿ, ಸುಖದೇವ ಕಟ್ಟಿಮನಿ, ತುಕಾರಾಮ ಮಮದಾಪೂರ, ದತ್ತಾತ್ರೇಯ ಆಲಮೇಲಕರ ಮತ್ತಿತರರು ಉಪಸ್ಥಿತರಿದ್ದರು.

# ಬೀದಿ ಬದಿ ವ್ಯಾಪಾರಸ್ಥರಿಗೆ ವೆಂಡಿಂಗ್ ಝೋನ್: ಆಟೋ–ದ್ವಿಚಕ್ರ ವಾಹನಗಳ ನಿಲುಗಡೆಗೆ ಪ್ರತ್ಯೇಕ ವ್ಯವಸ್ಥೆ

**ವಿಜಯಪುರ:** ವಿಜಯಪುರ ನಗರದ ಬೀದಿ ಬದಿ ವ್ಯಾಪಾರಸ್ಥರಿಗೆ ವೆಂಡಿಂಗ್ ಝೋನ್ ಜಾಗದ ವ್ಯವಸ್ಥೆ ಹಾಗೂ ಆಟೋ–ದ್ವಿಚಕ್ರ ವಾಹನಗಳ ನಿಲುಗಡೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಲು ಜಾಗ ಗುರುತಿಸಲಾಗಿದ್ದು, ಸೂಚಿಸಿರುವ ಸ್ಥಳಗಳಲ್ಲಿ ಬೀದಿಬದಿ ವ್ಯಾಪಾರಸ್ಥರು ವ್ಯಾಪಾರ ಕೈಗೊಳ್ಳದೇ ಇರುವುದು ಮತ್ತು ನಿಗದಿತ ಸ್ಥಳಗಳಲ್ಲಿ ವಾಹನಗಳನ್ನು ನಿಲುಗಡೆ ಮಾಡದೇ ಇರುವುದನ್ನು ಕಂಡು ಬಂದಲ್ಲಿ ಅಂತಹವರ ಮೇಲೆಕಾನೂನುರಿತ್ಯಕ್ರಮಕೈಗೊಂಡುದಂಡ ವಿಧಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ ಅವರು ತಿಳಿಸಿದ್ದಾರೆ.



ವಿಜಯಪುರ ನಗರದ ಬೀದಿ ಬದಿ ವ್ಯಾಪಾರಸ್ಥರು ಎಲ್ಲೆಂದರಲ್ಲಿ ವ್ಯಾಪಾರ ಮಾಡುವುದನ್ನು ತಡೆಗಟ್ಟಲು ಉಚ್ಛನ್ಯಾಯಾಲಯದ ಆದೇಶದಂತೆ, ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಮಹಾಪೌರರರ ಮಾರ್ಗದರ್ಶನ ಮತ್ತು ಜಿಲ್ಲಾಧಿಕಾರಿಗಳ ನಿರ್ದೇಶನದಲ್ಲಿ ನಗರದ ಸೌಂದರ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಗರದ ನೆಹರು ಮಾರ್ಕೆಟ್ ಹಿಂಭಾಗ, ಎಂ.ಆರ್.ಹೋಟೆಲ್ ಹತ್ತಿರ, ಕೆಎಸಆರಟಿಸಿ ಡಿಪೋ ಪಕ್ಕ, ಅಂಬೇಡ್ಕರ್ ಕ್ರೀಡಾಂಗಣ ಎದುರುಗಡೆ, ಸೈನಿಕಶಾಲೆ ಜಿಮಖಾನಾ ಕ್ಲಬ್ ಹಿಂದೆ, ಹಾಗೂ ಆಹಾರ ಮಾರಾಟಕ್ಕೆ ಇಂಡಿ ರೋಡ ಕ್ರೀಡಾಂಗಣದ ಹತ್ತಿರ, ಜಾಗಗಳನ್ನು ಗುರುತಿಸಿ, ಈ ಸ್ಥಳಕ್ಕೆ ಬೀದಿ ಬದಿ ವ್ಯಾಪಾರಸ್ಥರರೊಂದಿಗೆ ಮಹಾನಗರ ಪಾಲಿಕೆ ಆಯುಕ್ತರು ಇಂದು ಭೇಟಿ ನೀಡಿದ್ದು, ಈ ಸಂದರ್ಭದಲ್ಲಿ ಬೀದಿ ಬದಿ ವ್ಯಾಪಾರಸ್ಥರು ಸಂತಸ ವ್ಯಕ್ತಪಡಿಸಿದ್ದಲ್ಲದೇ, ಮುಂದಿನ ದಿನಗಳಲ್ಲಿ ಈ ಜಾಗಗಳಲ್ಲಿಯೇ ವ್ಯಾಪಾರ ಕೈಗೊಳ್ಳುವುದಾಗಿ ತಿಳಿಸಿದರು.

ಜನದಟ್ಟಣೆ ನಿಯಂತ್ರಣ ಹಾಗೂ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಗಾಂಧಿ ಚೌಕ್ ಪೊಲೀಸ್ ಠಾಣೆಯಲ್ಲಿ ಬೀದಿ ಬದಿ ವ್ಯಾಪಾರಸ್ಥರು, ಆಟೋ ಮತ್ತು ಇತರೆ ದ್ವಿಚಕ್ರ ವಾಹನಗಳ ಮಾಲೀಕರೊಂದಿಗೆ ಸಭೆ ನಡೆಸಿ, ನಿಗದಿ ಸ್ಥಳಗಳಲ್ಲಿ ಮಾತ್ರ ವಾಹನಗಳನ್ನು ನಿಲುಗಡೆ ಮಾಡಬೇಕು. ನಿಷೇಧಿತ ಪ್ರದೇಶಗಳಲ್ಲಿ ಯಾವುದೇ ವಾಹನಗಳನ್ನು ನಿಲುಗಡೆ ಮಾಡಬಾರದು.

ಈ ಕುರಿತಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಚಾರ ಪೊಲೀಸ್ ಅಧಿಕಾರಿಗಳಿಗೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಸೂಚನೆ ನೀಡಿದರಲ್ಲದೇ, ವೆಂಡಿಂಗ್ ಝೋನಗಳಲ್ಲಿ ಮಾತ್ರ ವ್ಯಾಪಾರ ವಹಿವಾಟು ಕೈಗೊಳ್ಳಬೇಕು. ನಿಗದಿತ ಸ್ಥಳಗಳಲ್ಲಿ ವಾಹನ ನಿಲುಗಡೆ ಹಾಗೂ ವ್ಯಾಪಾರ ವಹಿವಾಟು ಮಾಡದವರ ಮೇಲೆ ಕಾನೂನು ರೀತಿ ಕ್ರಮ ಕೈಗೊಂಡು ಸೂಕ್ತ ದಂಡ ವಿಧಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಈಸಂದರ್ಭದಲ್ಲಿಪೊಲೀಸ್ಇಲಾಖೆಇತರೆ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

# ಆಧ್ಯಾತ್ಮ ಪ್ರವಚನದ ಪರಿಕರ ಬಿಡುಗಡೆ

**ಬನಹಟ್ಟಿ** : ನಗರದ ಹಿರೇಮಠದಲ್ಲಿ ಡಿಸೆಂಬರ್ 11 ರಿಂದ 17 ವರೆಗೆ ಜರುಗುವ ಶ್ರೀ ಶಾಂತವೀರ ಶಿವಾಚಾರ್ಯರ 34 ನೇ ಚಿರಲಿಂಗಾಂಗ ಸಾಮರಸ್ಯ ಆಧ್ಯಾತ್ಮ ಪ್ರವಚನ ಹಾಗು ಅಯ್ಯಾಚಾರ ಸಾಮೂಹಿಕ ಲಿಂಗದೀಕ್ಷೆ ಕಾರ್ಯಕ್ರಮದ ಪರಿಕರಗಳನ್ನು ಬಿಡುಗಡೆಗೊಳಿಸಲಾಯಿತು.



ಪ್ರತಿದಿನ ಸಂಜೆ 6–30 ರಿಂದ ಜರುಗುವ ಆಧ್ಯಾತ್ಮಿಕ ಪ್ರವಚನದ ಸಾನಿಧ್ಯವನ್ನು ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯರು ವಹಿಸಲಿದ್ದಾರೆ. ಜಮಖಂಡಿ ಕಲ್ಯಾಣಮಠದ ಗೌರಿಶಂಕರ ಶಿವಾಚಾರ್ಯರ ನೇತೃತ್ವದಲ್ಲಿ ಹಿರೇಮಠದ ಶರಣಬಸವ ಶಿವಾಚಾರ್ಯರು ಅಧ್ಯಕ್ಷತೆ ವಹಿಸಲಿದ್ದಾರೆ. ಬಂಡಿಗಣಿಯ ಅನ್ನದಾನೇಶ್ವರ ಶ್ರೀಗಳ ಸಮ್ಮುಖದಲ್ಲಿ ಜಮಖಂಡಿ ಶಾಸಕ ಸಿದ್ದು ಸವದಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕ ಸಿದ್ದು ಸವದಿ, ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ, ಶೇಖರ ಮಾಲಾಪುರ, ಶ್ರೀಪಾದ ಬಾಣಕಾರ, ಶ್ರೀಶೈಲ ಧಬಾಡಿ, ಮಲ್ಲಿಕಾರ್ಜುನ ತುಂಗಳ ಅತಿಥಿಗಳಾಗಿ ಭಾಗವಹಿಸಿದ್ದಾರೆ.

ಪ್ರತಿ ದಿನ ಜೀವನ ದರ್ಶನ ವಿಷಯದಡಿ ಚಟ್ಟರಕಿಯ ಶಂಕ್ರಯ್ಯಾ ಶಾಸ್ತ್ರಿಗಳಿಂದ ಪ್ರವಚನ ನಡೆಯಲಿದೆ.

ಪರಿಕರಗಳ ಬಿಡುಗಡೆ ಸಂದರ್ಭ ಚನ್ನವೀರಪ್ಪ ಹಾದಿಮನಿ, ದಾನಪ್ಪ ಹುಲಜತ್ತಿ, ಸುಭಾಸ ಜಾಡಗೌಡ, ಪಂಡಿತ ಪಟ್ಟಣ, ಪ್ರಶಾಂತ ಕೊಳಕಿ, ಶಿವಕುಮಾರ ಜುಂಜಪ್ಪನವರ, ಗುರುಸಿದ್ದಪ್ಪ ಚನಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಶಿಷ್ಯವೇತನ ವಿತರಣಾ ಕಾರ್ಯಕ್ರಮ

# ಕೈಗಾರಿಕೆಗಳಿಗೆ ಆರ್ಥಿಕ ಅಭಿವೃದ್ಧಿ ಜೊತೆಗೆ ಸಾಮಾಜಿಕ ಜವಾಬ್ದಾರಿಯು ಮುಖ್ಯ: ದಿನೇಶ ಶರ್ಮಾ

## ಇಲ್ಲಿಯವರೆಗೆ 11 ಸಾವಿರ ವಿದ್ಯಾರ್ಥಿಗಳಿಗೆ ಸಹಾಯ: ಬಡ ವಿದ್ಯಾರ್ಥಿಗಳ ಶೈಕ್ಷನೀಕ ಅಭಿವೃದ್ಧಿಗೆ ನೆರವು

**ಮಹಾಲಿಂಗಪುರ** : ಒಂದು ದೇಶದ ಅಭಿವೃದ್ಧಿಯಲ್ಲಿ ಔದ್ಯೋಗೀಕರಣದ ಪಾತ್ರವು ಮುಖ್ಯವಾಗಿದೆ. ಕೈಗಾರಿಕೆಗಳ ಅಭಿವೃದ್ಧಿಯಿಂದ ಉದ್ಯೋಗವಕಾಶಗಳು ಮತ್ತು ಆರ್ಥಿಕ ಅಭೀವೃದ್ಧಿ ಸಾಧ್ಯ. ಜೊತೆಗೆ ಕೈಗಾರಿಕೆಗಳಿಗೆ ಸಾಮಾಜಿಕ ಜವಾಬ್ದಾರಿಯು ಬಹಳ ಮುಖ್ಯವಾಗಿದೆ ಎಂದು ಸಮೀರವಾಡಿಯ ಗೋದಾವರಿ ಕಾರ್ಖಾನೆಯ ತಾಂತ್ರೀಕ ವಿಭಾಗದ ಮುಖ್ಯಸ್ಥರಾದ ದಿನೇಶ ಶರ್ಮಾ ಹೇಳಿದರು.



ಬುಧವಾರ ಸಮೀಪದ ಸೈದಾಪುರ ಸಮೀರವಾಡಿ ಶಿವಲಿಂಗೇಶ್ವರ ದೇವಸ್ಥಾನದ ಸಭಾಭವನದಲ್ಲಿ ಸೋಮಯ್ಯ ಗ್ರಾಮೀಣ ವಿಕಾಸ ಕೇಂದ್ರ ಸಮೀರವಾಡಿ ಹಾಗೂ ವಿದ್ಯಾ ವಿಹಾರ ಮುಂಬೈ ಆಶ್ರಯದಲ್ಲಿ ಹೆಲ್ಪ್ ಎ ಚೈಲ್ಡ್ ಟು ಸ್ಟಡಿ ಯೋಜನೆಯ ಶಿಷ್ಯವೇತನ ವಿತರಣಾ ಸಮಾರಂಭದ ಅಧ್ಯಕ್ಷತೆವಹಿಸಿ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಚೆಕ್ ಮತ್ತು ಲ್ಯಾಪ್‌ಟಾಪ್, ಪಠ್ಯಪುಸ್ತಕಗಳನ್ನು ವಿತರಿಸಿ ಮಾತನಾಡಿದರು.

ಕಾರ್ಖಾನೆಯ ಮಾಲೀಕರಾದ ಸಮೀರಭಾಯಿ ಸೋಮೈಯಾ ಹಾಗೂ ಅಮೃತಾಬಾಬಿ ಸೋಮೈಯಾ ಅವರಿಗೆ ಶಿಷ್ಯವೇತನ ಕಾರ್ಯಕ್ರಮವು ಒಂದು ಸಾಮಾಜಿಕ ಕಾರ್ಯ ಮಾತ್ರವಾಗಿರದೇ ಅವರ ಹೃದಯಕ್ಕೆ ಹತ್ತಿರವಾದ ಸೇವಾಕಾರ್ಯವಾಗಿದೆ. ಅವರು ಕಾರ್ಖಾನೆಗೆ ಭೇಟಿಕೊಟ್ಟಾಗ ಮೊದಲು ಭೇಟಿಯಾಗುವದೇ ಕೆ.ಜ.ಸೋಮೈಯಾ ಶಾಲೆಗೆ. ಗೋದಾವರಿ ಕಾರ್ಖಾನೆಯಿಂದ ಈ ಭಾಗದ ರೈತರ ಆರ್ಥಿಕಾಭಿವೃದ್ಧಿ, ಕಾರ್ಮಿಕರಿಗೆ ಉದ್ಯೋಗವಕಾಶದ ಜೊತೆಗೆ ಬಡವಿದ್ಯಾರ್ಥಿಗಳ ಶೈಕ್ಷಣೀಕ ಪ್ರಗತಿಗಾಗಿ ಪ್ರತಿವರ್ಷ ನೂರಾರು ವಿದ್ಯಾರ್ಥಿಗಳಿಗೆ ಶಿಷ್ಯವೇತನ ವಿತರಿಸಲಾಗುತ್ತಿದೆ. ಶಿಷ್ಯವೇತನ ಪಡೆದ ವಿದ್ಯಾರ್ಥಿಗಳು ಯೋಜನೆಯ ಸದುಪಯೋಗ ಪಡೆದು, ಸಮಾಜದಲ್ಲಿ ಉತ್ತಮ ನಾಗರೀಕರಾಗಿ ಬೆಳೆದು, ತಾವು ಮರಳಿ ಈ ಯೋಜನೆಯ ಮೂಲಕ ಇನ್ನಷ್ಟು ವಿದ್ಯಾರ್ಥಿಗಳಿಗೆ ಸಹಾಯ ಮಾಡುವ ವ್ಯಕ್ತಿಗಳಾಗಿ ಬೆಳೆದಾಗ ಮಾತ್ರ, ಈ ಯೋಜನೆಯು ಸಾರ್ಥಕವಾಗಿ ಇನ್ನಷ್ಟು ಬಡ ವಿದ್ಯಾರ್ಥಿಗಳ ಬಾಳಲ್ಲಿ ವಿದ್ಯೆಯ ಬೆಳಕು ನೀಡಲು ಸಾಧ್ಯವಾಗುತ್ತದೆ ಎಂದರು.

ಹೆಲ್ಪ್ ಎ ಚೈಲ್ಡ್ ಟು ಸ್ಟಡಿ ಯೋಜನೆಯ ಮುಖ್ಯಸ್ಥ ಡಾ.ವಿಜಯಕುಮಾರ ಕಣವಿ ಮಾತನಾಡಿ ನಮ್ಮ ಕಾರ್ಖಾನೆಯಿಂದ ಶಿಷ್ಯವೇತನಕ್ಕಾಗಿ 2001 ರಿಂದ 2024ರವರೆಗೆ ಎಸೆಸೆಲ್ಸಿಯಿಂದ ಉನ್ನತ ಶಿಕ್ಷಣವರೆಗಿನ ಮುಂದಿನ ಎಲ್ಲ ವಿಭಾಗಗಳ ಸುಮಾರು ಸುಮಾರು 11,554 ಸಾವಿರ ಜಾಣ ಮತ್ತು ಬಡ ವಿದ್ಯಾರ್ಥಿಗಳಿಗೆ ಸುಮಾರು 8 ಕೋಟಿರೂಗಳ ಶಿಷ್ಯವೇತನ ವಿತರಿಸಲಾಗಿದೆ.‌ ನಮ್ಮ ಕಾರ್ಖಾನೆಯ ಸುತ್ತಲಿನ 50ಕೀಮಿ ವ್ಯಾಪ್ತಿಯ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ, ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ, ಬಡ ಮತ್ತು ಪ್ರತಿಭೆಯುಳ್ಳ ವಿಧ್ಯಾರ್ಥಿಗನ್ನು ಪಾರದರ್ಶಕವಗಿ ಆಯ್ಕೆ ಮಾಡಿ ಶಿಷ್ಯವೇತನ ನೀಡುತ್ತಿದ್ದೇವೆ. ನಮ್ಮ ಶಿಷ್ಯ ವೇತನ ಪಡೆದ ವಿದ್ಯಾರ್ಥಿಗಳಲ್ಲಿ ಶೇ.50ಕ್ಕೂ ಅಧಿಕ ವಿದ್ಯಾರ್ಥಿಗಳು ವೈದ್ಯರು, ಇಂಜಿನಿಬರ್, ಆರ್ಮಿ, ಅಂಚೆ ಇಲಾಖೆ, ಪೊಲೀಸ್ ಮತ್ತು ಶಿಕ್ಷಣ ಇಲಾಖೆ ಸೇರೆದಂತೆ ವಿವಿಧ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಮೆಡಿಕಲ್ ಮತ್ತು ಇಂಜಿನಿಯರಿಂಗ್ ಓದುತ್ತಿರುವ ಚೇತನ ಮಂಟೂರ, ಸುಪ್ರಾ ಹಳಿಂಗಳಿ, ಐಶ್ವರ್ಯಾ ಹೂಗಾರ, ಪವಿತ್ರಾ ಕೋರಿ ಅವರಿಗೆ ತಲಾ 1.60 ಲಕ್ಷ ರೂಗಳ ಚೆಕ್ ವಿತರಿಸಲಾಯಿತು. ಪ್ರಸಕ್ತ ವರ್ಷ 662 ವಿದ್ಯಾರ್ಥಿಗಳಿಗೆ ಒಟ್ಟು 54.41.316 ಲಕ್ಷ ಶಿಷ್ಯವೇತನ ಚೆಕ್‌ಗಳು, ಲ್ಯಾಪ್‌ಟಾಪ್ ಮತ್ತು ಪಠ್ಯಪುಸ್ತಕಗಳನ್ನು ವಿತರಿಸಲಾಯಿತು.

ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಶಿಷ್ಯವೇತನ ಫಲಾನುಭವಿಗಳಾದ ಚಂದ್ರಿಕಾ ನ್ಯಾಮಗೌಡ, ಬಂದವ್ವ ಮೂಗಳಖೋಡ, ಚೇತನ ಕಪ್ಪಲಗುದ್ದಿ ಯೋಜನೆಯಿಂದ ತಮ್ಮ ಶೈಕ್ಷನೀಕ ಜೀವನಕ್ಕೆ ದಾರಿಯಾದ ಅನುಭವಗಳನ್ನು ಹಂಚಿಕೊಂಡರು.

ಕಾರ್ಯನಿರ್ವಾಹಕ ನಿರ್ದೇಶಕ ಬಿ.ಆರ್.ಭಕ್ಷಿ, ಮೇಕ್ಯಾನಿಕ್ ವಿಭಾಗದ ಮುಖ್ಯಸ್ಥರಾದ ವ್ಹಿ.ಕೆ.ಕಿಲಾರಿ, ವಿವಿಧ ವಿಭಾಗದ ಅಧಿಕಾರಿಗಳಾದ, ಮಹ್ಮದ ಚಾವೂಸ್, ಡಾ.ಆರ್.ಎಸ್.ಶೆಟ್ಟರ, ಸೋಮಶೇಖರ ಪೇಟಿಮನಿ, ಕೃಷ್ಣಾ ಗೌಡರ, ರಾಮಚಂದ್ರ ಸೋನವಾಲ್ಕರ್, ಆನಂದ ಕೊಟಬಾಗಿ, ಡಾ.ರಮೇಶ ಶೆಟ್ಟರ್ ಹಾಗೂ ಸೋಮೈಯಾ ಶಿಷ್ಯವೇತನ ಸಹಾಯಕರಾದ ಸಂಜು ಬ್ಯಾಳಿ, ಸ್ವಾತಿ ಜಾಧವ, ರೇಖಾ ಮಠಪತಿ ಇದ್ದರು. ಡಾ.ವಿಜಯಕುಮಾರ ಕಣವಿ ನಿರೂಪಿಸಿ–ವಂದಿಸಿದರು.

# ರಬಕವಿಯಿಂದ ಗುಡ್ಡಾಪುರಕ್ಕೆ ಪಾದಯಾತ್ರೆ



**ರಬಕವಿ** : ಪ್ರತಿ ವರ್ಷದಂತೆ ಈ ವರ್ಷವೂ ಕೊರೆಯುವ ಚಳಿಯಲ್ಲಿ ಚಿಕ್ಕ ಮಕ್ಕಳು, ಯುವಕರು, ವಯಸ್ಕರು ಹಾಗೂ ವಯೋವೃದ್ಧರು ಸೇರಿದಂತೆ ರಬಕವಿ ಬನಹಟ್ಟಿ, ರಾಂಪುರ, ಹನಗಂಡಿ, ಹೊಸೂರ ಸೇರಿದಂತೆ ಅನೇಕ ಗ್ರಾಮಗಳಿಂದ ಎರಡು ಸಾವಿರಕ್ಕೂ ಅಧಿಕ ಭಕ್ತಾದಿಗಳು ಪಾದಯಾತ್ರೆ ಮೂಲಕ ನವೆಂಬರ 30 ರಂದು ಮಹಾರಾಷ್ಟ್ರದ ಗುಡ್ಡಾಪುರಲ್ಲಿ ಜರುಗುವ ದಾನಮ್ಮದೇವಿ ಜಾತ್ರೆ ನಿಮಿತ್ಯ ಆಕೆಯ ದರ್ಶನಕ್ಕಾಗಿ ಬುಧವಾರ ಬೆಳಿಗ್ಗೆ ಅವಳಿ ನಗರದಿಂದ ಪಾದಯಾತ್ರೆ ಮೂಲಕ ತೆರಳಿದರು.

ಬೆಳಗಿನ 5 ಕ್ಕೆ ರಬಕವಿ ನಗರದ ದಾನಮ್ಮದೇವಿ ದೇವಸ್ಥಾನದಲ್ಲಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ರಬಕವಿ ದಾನಮ್ಮದೇವಿ ಪಾದಯಾತ್ರಾ ಕಮೀಟಿಯ ಸರ್ವಸದಸ್ಯರು ಪಾದಯಾತ್ರೆಗೆ ಚಾಲನೆ ನೀಡಿದರು. ಪಾದಯಾತ್ರೆಗೆ ತೆರಳುವ ಮಾರ್ಗದಲ್ಲಿ ರಬಕವಿ ಶಿಕ್ಕಲಗಾರ ಸಮಾಜದ ಬಾಂಧವರ ನೇತೃತ್ವದಲ್ಲಿ ಸಾವಿರಾರು ಮುತ್ತೈದೆಯರಿಗೆ ಉಡಿ ತುಂಬುವುದು ಮತ್ತು ಎಲ್ಲ ಪಾದಯಾತ್ರೆ ಭಕ್ತರಿಗೆ ಅಲ್ಪೋಪಹಾರದ ವ್ಯವಸ್ಥೆ ಮಾಡಿ ಭಕ್ತಿ ಸೇವೆ ಮೆರೆದರು.

5–30 ರಿಂದಲೇ ಸಮೀಪದ ಕೃಷ್ಣಾ ನದಿ ತೀರದಿಂದ ಎರಡು ಬೋಟಗಳ ಸಹಾಯದಿಂದ ಸಾವಿರಾರು ಪ್ರಯಾಣಿಕರು ಸುರಕ್ಷಿತವಾಗಿ ಆ ದಡಕ್ಕೆ ಸೇರಿದರು. ದಾರಿಯುದ್ದಕ್ಕೂ ಅನೇಕ ದಾನಿಗಳು ದಾಸೋಹ ಸೇವೆಯಲ್ಲಿ ತೊಡಗಿದ್ದರು.

ಪಾದಯಾತ್ರಿಗಳು ಮಹೀಷವಾಡಗಿ ಗ್ರಾಮದ ಮಾರ್ಗವಾಗಿ ಅಥಣಿ ತಾಲೂಕಿನ ಕಕಮರಿ ಮೂಲಕ ನವೆಂಬರ 29 ರಂದು ಮಹಾರಾಷ್ಟ್ರದ ಗುಡ್ಡಾಪೂರ ಪ್ರವೇಶ ಮಾಡಲಿದ್ದು, ನವೆಂಬರ 30 ರಂದು ಜರುಗುವ ವಿಶೇಷ ಜಾತ್ರೆ ಹಾಗೂ ಕಾರ್ತಿಕ ಮಾಸದ ನಿಮಿತ್ಯ ಲಕ್ಷ ದೀಪೋತ್ಸವ ಸಮಾರಂಭದಲ್ಲಿ ಭಾಗಿಯಾಗಿ ಭಕ್ತರು ತಮ್ಮ ಊರುಗಳಿಗೆ ಮರಳಲಿದ್ದಾರೆ.

# ಇಂದು ರಬಕವಿಯ ದಾನಮ್ಮಾದೇವಿ ಜಾತ್ರೆ

**ರಬಕವಿ** : ಇಲ್ಲಿಯ ದಾನಮ್ಮಾದೇವಿ ಜಾತ್ರೆಯು ಛಟ್ಟಿ ಅಮವಾಸ್ಯೆಯ ಪ್ರಯುಕ್ತ ನವೆಂಬರ 30 ರಂದು ಬೆಳಿಗ್ಗೆ ಗುಡಿಯಲ್ಲಿ ಹೋಮ ಹವನ ಹಾಗೂ ಅಭಿಷೇಕದೊಂದಿಗೆ ಜರುಗುವುದು ಎಂದು ದೇವಸ್ಥಾನ ಟ್ರಸ್ಟ ಅಧ್ಯಕ್ಷ ಶಿವಜಾತ ಉಮದಿ ತಿಳಿಸಿದರು.

ಬುಧವಾರ ದಾನಮ್ಮದೇವಿ ದೇವಸ್ಥಾನದ ಆವರಣದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬೆಳಿಗ್ಗೆ 7 ಕ್ಕೆ ದಾನಮ್ಮದೇವಿಯ ಮೂರ್ತಿಗೆ ವಿಶೇಷ ಅಭಿಷೇಕ ಹಾಗೂ ನವಗ್ರಹ ಮೂರ್ತಿಗಳ ಪೂಜಾ ಸಮಾರಂಭ ಜರುಗುವುದು. 8 ಕ್ಕೆ ಸಕಲ ವಾದ್ಯ ಮೇಳದೊಂದಿಗೆ ಪಲ್ಲಕ್ಕಿ ಉತ್ಸವ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. ಬೆಳಿಗ್ಗೆ 10 ಗಂಟೆಯಿಂದ ಸಾವಿರಾರು ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ.

ಸಂಜೆ ಆರಕ್ಕೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಕಾರ್ತಿಕೋತ್ಸವಕ್ಕೆ ಶಾಸಕ ಸಿದ್ದು ಸವದಿ ಹಾಗೂ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಸಿದ್ದು ಕೊಣ್ಣೂರ ಚಾಲನೆ ನೀಡಲಿದ್ದಾರೆ. ಯಲಟ್ಟಿ ಗ್ರಾಮದ ಕೊಣ್ಣೂರ ಕಾಲೇಜಿನ ಪ್ರಾಚಾರ್ಯ ಬಸವರಾಜ ಕೊಣ್ಣೂರ, ಡಾ. ಪದ್ಮಜೀತ ನಾಡಗೌಡ ಪಾಟೀಲ, ಡಾ. ಉಮಾಶೇಖರ ಸ್ವಾಮಿ ಹಿರೇಮಠ ಕಾರ್ತಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಜಾತ್ರೆಯಲ್ಲಿ ಅವಳಿ ನಗರ ಸೇರಿದಂತೆ ಅಕ್ಕಪಕ್ಕದ ಗ್ರಾಮಗಳಾದ ಹಳಿಂಗಳಿ, ತಮದಡ್ಡಿ, ಮದನಮಟ್ಟಿ, ಹನಗಂಡಿ, ತೇರದಾಳ, ಜಗದಾಳ, ನಾವಲಗಿ, ಯಲ್ಲಟ್ಟಿ ಸೇರಿದಂತೆ ಅನೇಕ ಗ್ರಾಮಗಳಿಂದ ದಾನಮ್ಮ ತಾಯಿಯ ಭಕ್ತರು ಆಗಮಿಸಿ ದೀಪಗಳನ್ನು ಹಚ್ಚಿ ಕಾರ್ತಿಕೋತ್ಸವ ಆಚರಿಸಲಿದ್ದಾರೆ.

ನಂತರ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿದೆ ಎಂದು ಉಮದಿ ತಿಳಿಸಿದ್ದಾರೆ.

